ಸಂಪಾದಕ : ಶಿವಕುಮಾರ್ ಕೆ. ವರ್ಲಕೊಂಡ
PRGI : KNKAN/26/A2919
E-mail: skandagirivani@gmail.com

# ಸ್ಕಂದಗಿರಿ ವಾಣಿ

Editor : SHIVAKUMAR. K.
M.: 81475 82389 / 9743641515
ಸತ್ಯದ ಧ್ವನಿ
ಕನ್ನಡ ದಿನಪತ್ರಿಕೆ
₹2/-

SKANDAGIRI VANI Kannada Daily TUESDAY | October 13, 2026 | Volume 01 | Issue 87 | Pages 4 |

# ಶಿಡ್ಲಘಟ್ಟ ಕಾಂಗ್ರೆಸ್‌ನಲ್ಲಿ ಭಿನ್ನಮತದ ಕಿಡಿ

## ಮುನಿಯಪ್ಪ ಬೆಂಬಲವಿಲ್ಲದೆ ನಾಯಕರಾಗಲು ಸಾಧ್ಯವಿಲ್ಲ ಎಂದ ಸುಧಾಕರ್!

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಶಿಡ್ಲಘಟ್ಟ :** ಶಿಡ್ಲಘಟ್ಟ ಕ್ಷೇತ್ರದಲ್ಲಿ ಯಾರಾದರೂ ರಾಜಕೀಯವಾಗಿ ಕಾಂಗ್ರೆಸ್‌ನಲ್ಲಿ ಬೆಳೆದು ನಿಂತಿದ್ದಾರೆ ಎಂದರೆ ಅದು ಮಾಜಿ ಸಚಿವ, ಕಾಂಗ್ರೆಸ್‌ನ ಹಿರಿಯ ನಾಯಕ ವಿ.ಮುನಿಯಪ್ಪ ಅವರ ಕೃಪೆಯಿಂದ ಮಾತ್ರ ಸಾಧ್ಯವಾಗಿದೆ, ಅವರ ಸಹಕಾರ, ನೆರವು ಇಲ್ಲದೆ ರಾಜಕೀಯವಾಗಿ ನೆಲೆನಿಂತ ನಾಯಕರು ಯಾರೂ ಇಲ್ಲ ಎಂಬುದನ್ನು ನೇರವಾಗಿ ಹೇಳುತ್ತೇನೆ ಎಂದು ಮಾಜಿ ಸಚಿವ, ಚಿಂತಾಮಣಿ ಹಾಲಿ ಶಾಸಕ ಡಾ.ಎಂ.ಸಿ.ಸುಧಾಕರ್ ತಿಳಿಸಿದರು.

ತಾಲೂಕಿನ ಹಂಡಿಗನಾಳದ ಮಾಜಿ ಸಚಿವ ವಿ.ಮುನಿಯಪ್ಪ ಅವರ ನಿವಾಸದ ಆವರಣದಲ್ಲಿ ವಿಧಾನಪರಿಷತ್‌ನ ಆಗ್ನೇಯ ಪದವೀಧರ ಕ್ಷೇತ್ರದ ಅಭ್ಯರ್ಥಿ ಶಶಿ ಹುಲಿಕುಂಟೆಮಠ್ ಅವರ ಪರ ನಡೆದ ಪ್ರಚಾರ, ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದರು.

ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದಲ್ಲಿ ವಿ.ಮುನಿಯಪ್ಪ ಅವರು ಕಾಂಗ್ರೆಸ್ ಪಕ್ಷವನ್ನು ತಳಮಟ್ಟದಲ್ಲಿ ಕಟ್ಟಿ ಬೆಳೆಸಿದ್ದು ಅದನ್ನು ಮುಂದುವರೆಸಿಕೊಂಡು ಹೋಗುವ ಕೆಲಸವನ್ನು ನಾವು ಮಾಡಬೇಕಿದೆಯಷ್ಟೆ. ಅವರ ನೆರವು, ಸಹಕಾರ ಇಲ್ಲದೆ ಯಾರೂ ಕೂಡ ರಾಜಕೀಯವಾಗಿ ಇಲ್ಲಿ ಬೆಳೆದಿಲ್ಲ. ಆದರೂ ಅವರನ್ನು ಅಲ್ಲಗೆಳೆಯುವ ಕೆಲಸ ಮಾಡುವವರಿಗೆ ಮುಂದಿನ ದಿನಗಳಲ್ಲಿ ತಕ್ಕ ಪಾಠವನ್ನು ಕ್ಷೇತ್ರದ ಮತದಾರರು ಕಲಿಸಲಿದ್ದಾರೆ ಎಂದರು.



ಪಕ್ಷದಲ್ಲಿ ಸಣ್ಣ ಪುಟ್ಟ ಗೊಂದಲಗಳು ಇವೆ. ಅವೆಲ್ಲವನ್ನೂ ಮೀರಿ ನಾವು ಸಂಘಟಿತರಾಗಿ ಇದೀಗ ಎದುರಾಗಿರುವ ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಯುವ ಅಭ್ಯರ್ಥಿ, ವಿದ್ಯಾರ್ಥಿ ದೆಸೆಯಿಂದಲೆ ಕಾಂಗ್ರೆಸ್ ಬೆಂಬಲಿತರಾಗಿ ಬೆಳೆದ ಶಶಿ ಹುಲಿಕುಂಟೆಮಠ್ ಅವರನ್ನು ಗೆಲ್ಲಿಸುವ ಮೂಲಕ ಹೊಸ ಇತಿಹಾಸ ನಿರ್ಮಿಸಬೇಕೆಂದು ಮತದಾರರಲ್ಲಿ ಮನವಿ ಮಾಡಿದರು.

ರಾಜ್ಯ ಕಾಂಗ್ರೆಸ್ ಸರಕಾರವು ಪದವೀಧರರು, ಶಿಕ್ಷಕರು, ನೌಕರರ ಸಮಸ್ಯೆಗಳಿಗೆ ಸದಾ ಸ್ಪಂಧಿಸುತ್ತಾ ಬಂದಿದೆ. 78 ಸಾವಿರ ಉದ್ಯೋಗಗಳನ್ನು ನಿರ್ಮಿಸುವ ಭರವಸೆ ನೀಡಿದ್ದು ಈಗಾಗಲೆ 18 ಸಾವಿರ ಉದ್ಯೋಗಳಿಗೆ ನೋಟಿಫಿಕೇಷನ್ ಮುಗಿದಿದ್ದು ವಿವಿಧ ಹಂತಗಳಲ್ಲಿ ನೇಮಕಾತಿ ಪ್ರಕ್ರಿಯೆ ನಡೆದಿದೆ ಎಂದರು.

ಕೃಷಿಯೊಂದಿಗೆ ಕೈಗಾರಿಕೆ ಕ್ಷೇತ್ರದ ಬೆಳವಣಿಗೆ ನಮ್ಮ ರಾಜ್ಯ ಕಾಂಗ್ರೆಸ್ ಸರಕಾರದ ಆಶಯವಾಗಿದ್ದು ಜಿಲ್ಲೆಯಲ್ಲಿ ಸುಮಾರು 10 ಸಾವಿರ ಎಕರೆಯಷ್ಟು ಜಮೀನನ್ನು ಕೈಗಾರಿಕೆ ಪ್ರದೇಶ ಅಭಿವೃದ್ದಿಗಾಗಿ ಸ್ವಾಧೀನಪಡಿಸಿಕೊಳ್ಳಲಾಗಿದೆ. ಎಲ್ಲಿಯೂ ಯಾರನ್ನು ಒಕ್ಕಲೆಬ್ಬಿಸುವ ಕೆಲಸ ಮಾಡಿಲ್ಲ. ರೈತರ ಒಪ್ಪಿಗೆ ಇಲ್ಲದೆ ಬಲವಂತವಾಗಿ ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡೂ ಇಲ್ಲ ಎಂದು ಸ್ಪಷ್ಟಪಡಿಸಿದರು.

ರಾಜ್ಯ ಕಾಂಗ್ರೆಸ್ ಸರಕಾರದ ಈ ಎಲ್ಲ ಸಾಧನೆಗಳನ್ನು ಮತದಾರರ ಮುಂದಿಟ್ಟು ನಮ್ಮ ಪಕ್ಷದ ಅಭ್ಯರ್ಥಿ ಶಶಿ ಹುಲಿಕುಂಟೆಮಠ್ ಅವರನ್ನು ಗೆಲ್ಲಿಸುವ ಕೆಲಸವನ್ನು ಎಲ್ಲರೂ ಸೇರಿ ಮಾಡಬೇಕೆಂದು ಮನವಿ ಮಾಡಿದರು.

ಕಾಂಗ್ರೆಸ್ ಮುಖಂಡ, ಮಾಜಿ ಸಚಿವ ವಿ.ಮುನಿಯಪ್ಪ ಪುತ್ರ ಎಂ.ಶಶಿಧರ್‌ಮುನಿಯಪ್ಪ ಮಾತನಾಡಿ, ಕ್ಷೇತ್ರದಲ್ಲಿ ಗುಂಪುಗಾರಿಕೆ ಇರುವುದು ಸತ್ಯ. ಆದರೆ ಅದನ್ನೇ ಮುಂದುವರೆಸಿಕೊಂಡು ಹೋಗುವುದು ಪಕ್ಷ, ಕಾರ್ಯಕರ್ತರ ಹಿತದೃಷ್ಟಿಯಿಂದ ಒಳ್ಳೆಯದಲ್ಲ ಎನ್ನುವುದನ್ನು ಅರಿತು ಅನೇಕ ಭಾರಿ ಹೈ ಕಮಾಂಡ್ ಬಳಿ ನಾನು ಮತ್ತು ಡಾ.ಎಂ.ಸಿ.ಸುಧಾಕರ್ ಅವರು ಪ್ರಸ್ತಾಪಿಸಿದ್ದು ಸತ್ಯ. ಆದರೆ ಯಾಕೋ ಹೈಕಮಾಂಡ್ ಈ ಬಗ್ಗೆ ಅಷ್ಟಾಗಿ ಗಮನ ಹರಿಸಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದ ಅವರು, ಸಮಯ ಬಂದಾಗ ಎಲ್ಲವೂ ಸರಿಹೋಗುತ್ತದೆ. ಕಾರ್ಯಕರ್ತರು ಈ ಬಗ್ಗೆ ತಲೆ ಕೆಡಸಿಕೊಳ್ಳದೆ ಆಗ್ನೇಯ ಪದವೀಧರ ಕ್ಷೇತ್ರದ ಅಭ್ಯರ್ಥಿಯನ್ನು ಗೆಲ್ಲಿಸುವ ಕೆಲಸ ಮಾಡಬೇಕು, ಉಳಿದಿದ್ದನ್ನು ಹೈಕಮಾಂಡ್ ಮಾಡಲಿದೆ ಎಂದರು.

ಪದವೀಧರ ಕ್ಷೇತ್ರದ ಮತದಾರರು ಪ್ರತಿ 3 ವರ್ಷಕ್ಕೊಮ್ಮೆ ತಮ್ಮ ಮತದಾನ ಪಟ್ಟಿಯನ್ನು ನವೀಕರಣ ಮಾಡುವ ಕೆಲಸವನ್ನು ಮಾಡಬೇಕಿದ್ದು ಚುನಾವಣಾ ಆಯೋಗವು ಆ ಕ್ರಿಯೆಯನ್ನು ತಪ್ಪಿಸಿ ಒಮ್ಮೆ ನೋಂದಣಿ ಮಾಡಿಸಿದರೆ ಮತ್ತೆ ಮತ್ತೆ ಮರು ನೋಂದಣಿ ಮಾಡಿಸುವ ಕೆಲಸ ಬೇಕಿಲ್ಲ. ಒಂದೊಮ್ಮೆ ಕ್ಷೇತ್ರ ಬದಲಾವಣೆ ಆದಾಗ ಅಥವಾ ಮೃತಪಟ್ಟಾಗ ಮಾತ್ರ ಅಗತ್ಯ ಕ್ರಮ ಕೈಗೊಳ್ಳುವಂತಾಗಬೇಕು ಎಂದು ಆಗ್ರಹಿಸಿದರು. ಆಗ್ನೇಯ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಅಭ್ಯರ್ಥಿ ಶಶಿಹುಲಿಕುಂಟೆಮಠ್ ಅವರು ಕಳೆದ 29 ವರ್ಷಗಳಿಂದಲೂ ಪದವೀಧರರ, ಶಿಕ್ಷಕರ ಸಮಸ್ಯೆಗಳನ್ನು ಅರಿತು ಅವರೊಂದಿಗೆ ಕೆಲಸ ಮಾಡುತ್ತಿರುವ, ನಿಷ್ಠಾವಂತ ಕಾಂಗ್ರೆಸ್ಸಿಗ ಮಿಗಿಲಾಗಿ ಯುವಕನೊಬ್ಬನ್ನು ವಿಧಾನಪರಿಷತ್‌ಗೆ ಕಳುಹಿಸಿ ಎಂದು ಮತದಾರರಲ್ಲಿ ಮನವಿ ಮಾಡಿದರು.

ಕಾಂಗ್ರೆಸ್ ಮುಖಂಡ ಪುಟ್ಟು ಆಂಜಿನಪ್ಪ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಡಾಲ್ಫಿನ್ ನಾಗರಾಜ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಹೊಸಪೇಟೆ ಮುನಿಯಪ್ಪ, ಜಿ.ಪಂ ಮಾಜಿ ಅಧ್ಯಕ್ಷ ವಿ.ಸುಬ್ರಮಣಿ, ದೇವರಮಳ್ಳೂರು ರಾಕೇಶ್, ಡಿ.ವಿ.ಆಂಜನೇಯರೆಡ್ಡಿ, ಚೌಡಸಂದ್ರ ಮಹೇಶ್, ಭಕ್ತರಹಳ್ಳಿ ಮಧು, ಮಳಮಾಚನಹಳ್ಳಿ ಸುನಿಲ್ ಕಾರ್ಯಕರ್ತರು ಹಾಜರಿದ್ದರು.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ವರ್ಲ್ಡ್ ಸ್ಕಿಲ್ ಕಾಂಪಿಟೇಷನ್ 02 ವರ್ಷಗಳಿಗೊಮ್ಮೆ ಪ್ರಪಂಚದ ಆಯಕಟ್ಟಿನ ಸ್ಥಳಗಳಲ್ಲಿ ದೇಶಗಳಲ್ಲಿ ಆಯೋಜಿಸಲಾಗುವ ಪ್ರಮುಖ ಜಾಗತಿಕ ಕಾರ್ಯಕ್ರಮವಾಗಿದ್ದು, 75 ಕ್ಕಿಂತಲೂ ಹೆಚ್ಚು ದೇಶಗಳು ಭಾಗವಹಿಸುತ್ತಿವೆ. 16 ರಿಂದ 25 ವರ್ಷದೊಳಗಿನ 1000 ಕ್ಕೂ ಹೆಚ್ಚು ಯುವಜನತೆ 63 ಕೌಶಲ್ಯದ ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳುವ ಅತೀದೊಡ್ಡ ವೃತ್ತಿಪರ ಶಿಕ್ಷಣ ಮತ್ತುಕೌಶಲ್ಯ ಶ್ರೇಷ್ಠತೆಯ ಕಾರ್ಯಕ್ರಮವಾಗಿದೆ. 2026 ರಲ್ಲಿ ವಿಶ್ವಕೌಶಲ್ಯ ಸ್ಪರ್ಧೆಯು ಚೀನಾ ದೇಶದ ಶಾಂಘೈ ನಗರದಲ್ಲಿ ನಡೆಯಲಿದೆ.

ಇದಕ್ಕೆ ಪೂರ್ವ ಬಾವಿಯಾಗಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮವು ಇಂಡಿಯಾ ಸ್ಕಿಲ್ ಕರ್ನಾಟಕ 2026 ಸ್ಪರ್ಧೆಯನ್ನು ಆಯೋಜಿಸಿದೆ. ಕೌಶಲ್ಯ ಸ್ಪರ್ಧೆಗಳಲ್ಲಿ ಗೆಲುವು ಸಾಧಿಸಿದವರಿಗೆ ನಿರಂತರ ತರಬೇತಿಯನ್ನು ಒದಗಿಸಿ ಪ್ರಾದೇಶಿಕ ಮತ್ತುರಾಷ್ಟ್ರ ಮಟ್ಟದಲ್ಲಿ ಗೆಲುವು ಸಾಧಿಸಲು ಹಾಗೂ ಭಾರತವನ್ನು ಜಾಗತಿಕ ಮಟ್ಟದಲ್ಲಿ ಪ್ರತಿನಿಧಿಸಲು ವೇದಿಕೆಯನ್ನು ಕಲ್ಪಿಸಿಕೊಡಲಾಗುವುದು. ಈ ಕುರಿತು ಸಂಪೂರ್ಣ ಮಾಹಿತಿಗಾಗಿ ವರ್ಲ್ಡ್ ಸ್ಕಿಲ್ ಮತ್ತು ಇಂಡಿಯಾ ಸ್ಕಿಲ್ ಕರ್ನಾಟಕ 2025 ಗೆ ಲಾಗಿನ್ ಮಾಡಿ ಅರ್ಜಿ ಸಲ್ಲಿಸಬಹುದು.

ನೋಂದಣಿ ಹಾಗೂ ಭಾಗವಹಿಸುವ ಅವಕಾಶವು ಸಂಪೂರ್ಣವಾಗಿ ಉಚಿತವಾಗಿದೆ. ಅರ್ಜಿ ಸಲ್ಲಿಸುವ ಅವಧಿಯನ್ನು ಅಕ್ಟೋಬರ್ 17 ರವರೆಗೆ ವಿಸ್ತರಿಸಲಾಗಿದ್ದು, ಜಿಲ್ಲೆಯ ಅರ್ಹ ಅಭ್ಯರ್ಥಿಗಳು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9606492216ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಎಂ.ಪ್ರಸಾದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನರ್ಸ್ ಹುದ್ದೆಗೆ ನೇರ ಸಂದರ್ಶನ

ಬೆಂಗಳೂರು: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಬೆಂಗಳೂರು ನಗರ ಜಿಲ್ಲೆಯಲ್ಲಿ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಕಾರ್ಯಕ್ರಮದಡಿ ಅನೇಕಲ್ ಸಾರ್ವಜನಿಕ ಆಸ್ಪತ್ರೆಯಲ್ಲಿ ಓರ್ವ ನರ್ಸ್ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ನೇರ ಸಂದರ್ಶನಕ್ಕೆ ಅಭ್ಯರ್ಥಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಕರ್ನಾಟಕ ನರ್ಸಿಂಗ್ ಕೌನ್ಸಿಲ್ ಅಥವಾ ಭಾರತೀಯ ನರ್ಸಿಂಗ್ ಕೌನ್ಸಿಲ್ ಮಾನ್ಯತೆ ಪಡೆದ ಸಂಸ್ಥೆಯಿಂದ ಬಿ.ಎಸ್ಸಿ. ನರ್ಸಿಂಗ್ ಅಥವಾ ಸಮಾನ ಪದವಿ ಹೊಂದಿರಬೇಕು. ಬಿ.ಎಸ್ಸಿ. ನರ್ಸಿಂಗ್ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಜನರಲ್ ನರ್ಸಿಂಗ್ ಮತ್ತು ಮಿಡ್‌ವೈಫರಿ ವಿದ್ಯಾರ್ಹತೆ ಹೊಂದಿರುವವರನ್ನು ಪರಿಗಣಿಸಲಾಗುವುದು. ಅಭ್ಯರ್ಥಿಯು ಕನ್ನಡ ಭಾಷೆಯನ್ನು ಓದಲು, ಬರೆಯಲು ಹಾಗೂ ಮಾತನಾಡಲು ಸಮರ್ಥರಾಗಿರಬೇಕು. 45 ವರ್ಷ ವಯೋಮಿತಿಯೊಳಗಿನ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ನರವೈಜ್ಞಾನಿಕ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳ ಮೌಲ್ಯಮಾಪನ ಹಾಗೂ ಆರೈಕೆಯಲ್ಲಿ ಕನಿಷ್ಠ ಒಂದು ವರ್ಷದ ಅನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು. ಆಯ್ಕೆಯಾದವರಿಗೆ ಮಾಸಿಕ ರೂ.19,999/– ಗೌರವಧನ ನೀಡಲಾಗುವುದು.ಅ.22 ರಂದು ಬೆಳಗ್ಗೆ 11ರಿಂದ ಮಧ್ಯಾಹ್ನ 3ರವರೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಹಳೇ ಮದ್ರಾಸ್ ರಸ್ತೆ, ಸ್ವಾಮಿ ವಿವೇಕಾನಂದ ಮೆಟ್ರೋ ನಿಲ್ದಾಣದ ಸಮೀಪ, ಇಂದಿರಾನಗರ, ಬೆಂಗಳೂರು ಇಲ್ಲಿ ನೇರ ಸಂದರ್ಶನ ನಡೆಯಲಿದೆ. ಆಸಕ್ತ ಅಭ್ಯರ್ಥಿಗಳು ತಮ್ಮ ಮೂಲ ದಾಖಲೆಗಳು ಹಾಗೂ ಅವುಗಳ ನಕಲು ಪ್ರತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9740491347 ಹಾಗೂ ಇ–ಮೇಲ್: ಮೂಲಕ ಸಂಪರ್ಕಿಸಬಹುದು.

# ನವರಾತ್ರಿ ಉತ್ಸವಕ್ಕೆ ಶಾಸಕ ಕೆಎಚ್ಪಿ ಚಾಲನೆ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಗೌರಿಬಿದನೂರು:** ನಗರದಲ್ಲಿ ಪಿನಾಕಿನಿ ಯುತ್ಸ್ ನವರಾತ್ರಿ ಉತ್ಸವದ ಅಂಗವಾಗಿ ದುರ್ಗಾದೇವಿಯನ್ನು ಪ್ರತಿಷ್ಠಾಪಿಸಿದ್ದು, ಇದು ಸತತ ಮೂರನೇ ವರ್ಷದ ಸಮಾರಂಭವಾಗಿದೆ. ಶಾಸಕ ಕೆ.ಎಚ್.ಪುಟ್ಟಸ್ವಾಮಿಗೌಡ ಸಮಾರಂಭಕ್ಕೆ ಭಾನುವಾರ ಚಾಲನೆ ನೀಡಿದರು.



ಬಳಿಕ ಮಾತನಾಡಿದ ಶಾಸಕ ಕೆ.ಎಚ್.ಪುಟ್ಟಸ್ವಾಮಿಗೌಡ, ಪಿನಾಕಿನಿ ಯುತ್ಸ್ ನಗರದಲ್ಲಿ ದುರ್ಗಾಮಾತೆಯನ್ನು ಪ್ರತಿಷ್ಠಾಪಿಸುವ ಮೂಲಕ ತಾಲೂಕಿನ ಜನರಿಗೆ ದಸರಾ ಹಬ್ಬದ ಸಡಗರ ಸಂಭ್ರವನ್ನು ಅನುಭವಿಸುವಂತೆ ಮಾಡಿದ್ದಾರೆ. ದೂರದ ಮೈಸೂರಿಗೆ ಪ್ರಯಾಣಿಸಲು ಸಾಧ್ಯವಾಗದಿರುವವರಿಗೆ ಇಲ್ಲಿನ ಈ ಸಮಾರಂಭವು ಅನುಕೂಲವಾಗಿದೆ. ಇಲ್ಲೇ ದುರ್ಗಾದೇವಿಯ ದರ್ಶನವನ್ನು ಪಡೆಯುವಂತಾಗಿದೆ ಎಂದರು.

ಪ್ರತಿಮೆಯನ್ನು ಬಹಳ ಚೆನ್ನಾಗಿ ನಿರ್ಮಿಸಲಾಗಿದೆ. ಸಾಕ್ಷಾತ್ ದುರ್ಗಾದೇವಿಯಂತೆಯೇ ಪ್ರತಿಮೆಯಿದೆ. ಕಲ್ಕತ್ತದಲ್ಲಿನ ದುರ್ಗಾದೇವಿಯನ್ನು ನೋಡದವರು ಈ ಪ್ರತಿಮೆಯನ್ನು ನೋಡಿ ಕಣ್ತುಂಬಿಕೊಳ್ಳಬಹುದು. ಎಂದು ಹೇಳಿದರು.

ಪಿನಾಕಿನಿ ಯುತ್ಸ್ ಈ ಸಮಾರಂಭವನ್ನು ಹೀಗೆಯೇ ಮುಂದುವರೆಸಿಕೊಂಡು ಹೋಗಲಿ, ನಾನು ಸದಾ ಅವರೊಂದಿಗೆ ಇರುತ್ತೇನೆ ಎಂದರು.

ಮುಖಂಡರಾದ ಆರ್.ಅಶೋಕ್‌ಕುಮಾರ್, ವೆಂಕಟರಾಮರೆಡ್ಡಿ, ವಿಜಯ್‌ಕುಮಾರ್, ಶ್ರೀನಿವಾಸಗೌಡ, ಅಲ್ಲಂಪಲ್ಲಿ ವೇಣು, ಎನ್.ಆರ್. ಮಂಜುನಾಥ, ರೂಪಾ ಅನಂತರಾಜು, ಸಂಘಟಕ ಎಲ್‌ಐಸಿ ರವಿ, ಮಂಜುನಾಥ, ಅಶ್ವತ್ಥನಾರಾಯಣ, ರಾಜು, ಮಹೇಂದ್ರ, ಆನಂದ ಇದ್ದರು.

# ಡ್ರೋನ್ ಹಬ್ ಎಫೆಕ್ಟ್ ಜೀಡರಹಳ್ಳಿಯಲ್ಲಿ ಜಮೀನು ಕದನ!

## ಬಂಗಾರದ ಬೆಲೆಯಾದ ಜಮೀನುಗಳಿಂದ ಹೆಚ್ಚಿದ ವ್ಯಾಜ್ಯ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಂತಾಮಣಿ:** ಒಂದು ಕಾಲದಲ್ಲಿ ಕೇಳುವವರೇ ಇಲ್ಲದಿದ್ದ ಜಮೀನುಗಳಿಗೆ ಈಗ ಬಂಗಾರದ ಬೆಲೆ. ಡ್ರೋನ್ ಹಬ್ ಸ್ಥಾಪನೆಯ ಬೆನ್ನಲ್ಲೇ ಜಮೀನುಗಳ ಮೌಲ್ಯ ಗಗನಕ್ಕೇರಿದ್ದು, ಇದರೊಂದಿಗೆ ಜಮೀನು ವಿವಾದಗಳೂ ಹೆಚ್ಚಾಗುತ್ತಿವೆ. ಚಿಂತಾಮಣಿ ತಾಲೂಕಿನ ಕೈವಾರ ಹೋಬಳಿ ಜೀಡರಹಳ್ಳಿ ಬಳಿ ಡ್ರೋನ್ ಹಬ್ ಯೋಜನೆಯ ಹಿನ್ನೆಲೆಯಲ್ಲಿ ಜಮೀನು ವಿಚಾರವಾಗಿ ಎರಡು ಗುಂಪುಗಳ ನಡುವೆ ಸಂಘರ್ಷ ಉಂಟಾಗಿ, ಪೊಲೀಸರ ಮುಂದೆಯೇ ಕೈ ಕೈ ಮಿಲಾಯಿಸುವ ಹಂತಕ್ಕೆ ತಲುಪಿದ ಘಟನೆ ಮತ್ತು ನ್ಯಾಯಾಲಯದ ದಾವೆ ಬಗ್ಗೆ ಹಾಕಿದ್ದ ಬೋರ್ಡನ್ನು ಮಹಿಳೆಯರು ಕಿತ್ತು ಹಾಕಿದ್ದು ಸ್ಥಳೀಯವಾಗಿ ಚರ್ಚೆಗೆ ಗ್ರಾಸವಾಗಿದೆ.




ಕೈವಾರ ಹೋಬಳಿಯ ಜೀಡರಹಳ್ಳಿ ಗ್ರಾಮದ ಸರ್ವೆನಂ 53ರಲ್ಲಿ 72 ಎಕರೆ ಗೋಮಾಳ ಜಮೀನು ಇದೆ, ಸದರಿ ಜಮೀನಿನಲ್ಲಿ ಜೀಡರಹಳ್ಳಿ ಗ್ರಾಮದ ಮುನಿಯಪ್ಪ ಎಂಬವರು ಸುಮಾರು 4 ಎಕರೆ ಜಮೀನು ಮಂಜೂರಾಗಿದ್ದು ಸದರಿ ಜಮೀನನ್ನು ಕೈವಾರ ಹೋಬಳಿ ಸುಬ್ಬರಾಯನ ಪೇಟೆ ಗ್ರಾಮದ ನಿವಾಸಿ ವಿ.ಮಂಜುನಾಥ್ ರವರಗೆ 4 ಲಕ್ಷ 50 ಸಾವಿರ ರೂಗಳಿಗೆ ಜನರಲ್ ಪವರ್ ಆಫ್ ಆಟಾರ್ನಿಯ ಯಾ ಸಾಮಾನ್ಯ ಅಧಿಕಾರ ಪತ್ರವನ್ನು 2022 ರಲ್ಲಿ ನೋಂದಣಿ ಮಾಡಿಸಿಕೊಂಡಿದ್ದಾರೆ. ಸದರಿ ಜಮೀನನ್ನು ಪಕ್ಕದ ಜಮೀನಿನ ನಿವಾಸಿಗಳಾದ ನಿವೃತ್ತ ಸೈನಿಕ ಚನ್ನಪ್ಪ, ಅವರ ಅಣ್ಣ ತಮ್ಮಂದಿರಾದ ಶ್ರೀನಿವಾಸರೆಡ್ಡಿ ಮಂಜುನಾಥ ರೆಡ್ಡಿ ರವರ ಜಮೀನಿಗಾಗಿ ಅರ್ಜಿ ಸಲ್ಲಿಸಿದ್ದಾರೆ ಹೊರತು ಅವರಿಗೆ ಯಾವದೇ

ಜಮೀನು ಸರ್ಕಾರ ಮಂಜೂರಾಗಿ ಮಾಡಿಲ್ಲ ಆದರೆ ಸರ್ಕಾರಿ ಗೋಮಾಳು ಜಮೀನು ಮತ್ತು ಮಂಜುನಾಥ ರವರಿಗೆ ಸೇರಿದ ಜಮೀನು ಸೇರಿಸಿ ಒಟ್ಟು 20 ಎಕರೆ ಜಮೀನನ್ನು ಒತ್ತುವರಿ ಮಾಡಿಕೊಂಡು ಕಾಂಪೌಂಡ್ ಹಾಕಿರುವುದರಿಂದ ಸುಬ್ಬರಾಯನ ಪೇಟೆಯ ಮಂಜುನಾಥ್ ಮತ್ತು ಚನ್ನಪ್ಪ ರವರ ನಡುವೆ ಇದೀಗ ಜಮೀನು ತಕರಾರು ಎದ್ದಿದೆ.

ಇಂದು ಮಂಜುನಾಥ್ ರವರು ನ್ಯಾಯಾಲಯದ ದಾವೆ ಹೂಡಿರುವ ಬಗ್ಗೆ ಸದರಿ ಜಮೀನಿನಲ್ಲಿ ಬೋರ್ಡ ಅಳವಡಿಸಲು ಮುಂದಾದಾಗ ಚನ್ನಪ್ಪರವರ ಕಡೆಯ ಮಹಿಳೆಯರು ಹಾಕಿರುವ ಬೋರ್ಡ ಕಿತ್ತು ಬೇರೆಡೆಗೆ ಬಿಸಾಕುವ ಮೂಲಕ ಹಾಕಿರುವ ಮಳ್ಳು ತಂತಿ ಕಾಂಪೌಂಡ್ ಧ್ವಂಸ ಮಾಡುವ ಮೂಲಕ ಜಮೀನು ವಿವಾದ ಕ್ರಿಮಿನಲ್ ರೂಪ ಪಡೆದುಕೊಂಡು ಕೈ ಕೈ ಮಿಲಾಯಿಸಿದ ಘಟನೆಯ ಹಂತಪ್ಪ ತಲುಪಿತು.

ಡ್ರೋನ್ ಹಬ್‌ನಿಂದ ಜಮೀನಿಗೆ ಚಿನ್ನದ ಬೆಲೆ. ಕಳೆದ ಸಚಿವ ಸಂಪುಟ ಸಭೆಯಲ್ಲಿ ಮಂಜೂರಾಗಿದ್ದ ಡ್ರೋನ್ ಹಬ್ ಯೋಜನೆಯಡಿ ಜೀಡರಹಳ್ಳಿ ಬಳಿ ಸುಮಾರು 19 ಎಕರೆ ಜಮೀನಿನಲ್ಲಿ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಉದ್ದೇಶಿಸಲಾಗಿದೆ. ಈ ಯೋಜನೆಯಿಂದ ಸುತ್ತಮುತ್ತಲಿನ ಪ್ರದೇಶದ ಭವಿಷ್ಯದ ಅಭಿವೃದ್ಧಿ ಹಾಗೂ ಜಮೀನುಗಳ ಮೌಲ್ಯ ಹೆಚ್ಚುವ ನಿರೀಕ್ಷೆ ಮೂಡಿದೆ.

ಪರಿಣಾಮವಾಗಿ, ಈ ಹಿಂದೆ ಅಷ್ಟಾಗಿ ಗಮನ ಸೆಳೆಯದಿದ್ದ ಜಮೀನುಗಳಿಗೂ ಈಗ ಭಾರಿ ಬೇಡಿಕೆ ಸೃಷ್ಟಿಯಾಗಿದ್ದು, ಭೂಮಿಯ ಒಡೆತನ, ಗಡಿ ಹಾಗೂ ಹಕ್ಕುಗಳ ವಿಚಾರವಾಗಿ ವಿವಾದಗಳು ಮುನ್ನೆಲೆಗೆ ಬರುತ್ತಿವೆ. ಸರ್ವೇ ನಂಬರ್ 53ರಲ್ಲಿ ಸಂಘರ್ಷ ಜೀಡರಹಳ್ಳಿಯ ಸರ್ವೇ ನಂಬರ್ 53ರ ವ್ಯಾಪ್ತಿಯ ಜಮೀನು ವಿಚಾರವಾಗಿ ಎರಡು ಗುಂಪುಗಳ ನಡುವೆ ಗಲಾಟೆ ನಡೆದಿದೆ. ಡ್ರೋನ್ ಹಬ್‌ಗೆ ಹೊಂದಿಕೊಂಡಿರುವ ಜಮೀನುಗಳ ವಿಚಾರವೇ ಈ ಸಂಘರ್ಷಕ್ಕೆ ಹಿನ್ನೆಲೆಯಾಗಿದೆ ಎಂಬ ಚರ್ಚೆ ಸ್ಥಳೀಯವಾಗಿ ಕೇಳಿಬರುತ್ತಿದೆ.

ಪರಿಸ್ಥಿತಿ ವಿಕೋಪಕ್ಕೆ ತಿರುಗಿ, ಪೊಲೀಸರ ಸಮ್ಮುಖದಲ್ಲೇ ಪರಸ್ಪರ ಕೈ ಕೈ ಮಿಲಾಯಿಸುವ ಹಂತಕ್ಕೆ ತಲುಪಿದ್ದು, ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ.

ಮಾಜಿ ಸೈನಿಕ ಏರ್‌ಪೋರ್ಟ್ ಎಕ್ಸಿಕ್ಯೂಟಿವ್ ಮ್ಯಾನೇಜರ್ ನಡುವೆ ಜಟಾಪಟಿ ಈ ಘಟನೆಯಲ್ಲಿ ಮಾಜಿ ಸೈನಿಕ ಚನ್ನಪ್ಪ ಹಾಗೂ ಏರ್‌ಪೋರ್ಟ್ ಎಕ್ಸಿಕ್ಯೂಟಿವ್ ಮ್ಯಾನೇಜರ್ ಸುಬ್ಬರಾಯನಪೇಟೆ ಮಂಜುನಾಥ್ ರವರ ನಡುವೆ ಮಾತಿನ ಚಕಮಕಿ ನಡೆದು, ಬಳಿಕ ಜಟಾಪಟಿಗೆ ತಿರುಗಿದೆ. ಡ್ರೋನ್ ಹಬ್ ಯೋಜನೆಯಿಂದ ಜಮೀನುಗಳ ಬೆಲೆ ಏರಿಕೆ ಯಾಗುತ್ತಿರುವ ನಡುವೆಯೇ, ಇಂತಹ ವಿವಾದಗಳು ಸಾರ್ವಜನಿಕರಲ್ಲಿ ಆತಂಕ ಮೂಡಿಸಿವೆ.

ಡ್ರೋನ್ ಹಬ್ ಯೋಜನೆ ಚಿಂತಾಮಣಿ ಭಾಗದ ಕೈಗಾರಿಕಾ ಹಾಗೂ ತಾಂತ್ರಿಕ ಅಭಿವೃದ್ಧಿಗೆ ಹೊಸ ಅವಕಾಶಗಳನ್ನು ತೆರೆದಿಡುವ ನಿರೀಕ್ಷೆಯಿದೆ. ಆದರೆ ಯೋಜನೆ ಸುತ್ತಲಿನ ಜಮೀನುಗಳ ವಿಚಾರದಲ್ಲಿ ವಿವಾದ ಹೆಚ್ಚಾದರೆ ಅಭಿವೃದ್ಧಿ ಮೇಲೆಯೂ ಪರಿಣಾಮ ಬೀರುವ ಸಾಧ್ಯತೆ ಇದೆ.

ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳು ಜಮೀನು ದಾಖಲೆಗಳು, ಸರ್ವೇ ವಿವರಗಳು ಹಾಗೂ ಮಾಲೀಕತ್ವದ ಹಕ್ಕುಗಳನ್ನು ಪರಿಶೀಲಿಸಿ, ಕಾನೂನುಬದ್ಧವಾಗಿ ಸಮಸ್ಯೆ ಬಗೆಹರಿಸಬೇಕೆಂಬ ಒತ್ತಾಯ ಕೇಳಿಬರುತ್ತಿದೆ. ಒಟ್ಟಿನಲ್ಲಿ, ಡ್ರೋನ್ ಹಬ್‌ನಿಂದ ಅಭಿವೃದ್ಧಿಯ ನಿರೀಕ್ಷೆ ಹೆಚ್ಚಿರುವ ಜೀಡರಹಳ್ಳಿಯಲ್ಲಿ ಜಮೀನುಗಳ ಬೆಲೆ ಏರಿಕೆಯ ಜೊತೆಗೆ ವ್ಯಾಜ್ಯಗಳೂ ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಅಭಿವೃದ್ಧಿಯ ಅವಕಾಶ ಸಂಘರ್ಷಕ್ಕೆ ಕಾರಣ ವಾಗದೆ, ಕಾನೂನುಬದ್ಧ ಪರಿಹಾರದ ಮೂಲಕ ಶಾಂತಿ ನೆಲೆಸುವಂತಾಗಬೇಕಾಗಿದೆ.

# ಜನಪರ ಧ್ವನಿಯಾದ ಕೆ.ಸಿ.ಮಂಜುನಾಥ್...!

## ಕನ್ನಮಂಗಲ ಜಿಪಂ ಕ್ಷೇತ್ರದ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಸ್ಥಾನದ ಆಕಾಂಕ್ಷಿ

## ಜನಸೇವೆ, ಅಭಿವೃದ್ಧಿ ಕಾರ್ಯಗಳ ಅನುಭವ; ಜನರ ಸಮಸ್ಯೆಗಳಿಗೆ ಸ್ಪಂದಿಸುವ ನಾಯಕ



ದೇವನಹಳ್ಳಿ: ದೇವನಹಳ್ಳಿ ತಾಲೂಕಿನ ಕನ್ನಮಂಗಲ ಗ್ರಾಮದ ನಿವಾಸಿ, ದೇವನಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ಸಿ.ಮಂಜುನಾಥ್ ಅವರು ಕನ್ನಮಂಗಲ ಜಿಪಂ ಕ್ಷೇತ್ರದಿಂದ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಸ್ಪರ್ಧಿಸಲು ಆಕಾಂಕ್ಷೆ ವ್ಯಕ್ತಪಡಿಸಿದ್ದಾರೆ. ಪಕ್ಷದ ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಅವರು, ಈ ಹಿಂದೆ ಜಿಪಂ ಸದಸ್ಯರಾಗಿ ಹಾಗೂ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ ಅನುಭವ ಹೊಂದಿದ್ದು, ಕ್ಷೇತ್ರದ ಅಭಿವೃದ್ಧಿ ಮತ್ತು ಜನಪರ ಕಾರ್ಯಗಳ ಮೂಲಕ ಗುರುತಿಸಿಕೊಂಡಿದ್ದಾರೆ.

ಸಾರ್ವಜನಿಕ ಜೀವನದಲ್ಲಿ ಜನರ ಸಮಸ್ಯೆಗಳಿಗೆ ಸ್ಪಂದಿಸುವುದು, ಗ್ರಾಮೀಣ ಪ್ರದೇಶಗಳ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡುವುದು ಹಾಗೂ ಬಡವರು, ಹಿಂದುಳಿದವರು ಮತ್ತು ಅಗತ್ಯವಿರುವ ವರ್ಗಗಳ ಜನರಿಗೆ ನೆರವಾಗುವುದು ತಮ್ಮ ಆದ್ಯತೆಯಾಗಿದೆ ಎಂಬ ನಿಲುವಿನೊಂದಿಗೆ ಹಲವು ಜನಪರ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಂಡಿದ್ದಾರೆ.

ಸಂಕಷ್ಟದ ಸಮಯದಲ್ಲೂ ಜನರ ನೆರವಿಗೆ

ಕೋವಿಡ್ ಸಂಕಷ್ಟದ ಸಂದರ್ಭದಲ್ಲಿ ಸಾರ್ವಜನಿಕರಿಗೆ ಉಚಿತ ಆಹಾರ ಮತ್ತು ದಿನಸಿ ಕಿಟ್‌ಗಳನ್ನು ವಿತರಿಸುವ ಮೂಲಕ ಸಂಕಷ್ಟದಲ್ಲಿದ್ದ ಕುಟುಂಬಗಳಿಗೆ ನೆರವಾಗಿದ್ದರು. ಶಾಲಾ ಮಕ್ಕಳಿಗೆ ನೋಟ್ ಪುಸ್ತಕ ಹಾಗೂ ಪತ್ರಿಕೆಗಳನ್ನು ವಿತರಿಸಿ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವ ಕಾರ್ಯದಲ್ಲಿಯೂ ತೊಡಗಿಸಿಕೊಂಡಿದ್ದರು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅಗತ್ಯ ಸೌಲಭ್ಯ ಕಲ್ಪಿಸುವುದು ಹಾಗೂ ಯುವಜನರ ಪ್ರತಿಭೆಗೆ ವೇದಿಕೆ ಒದಗಿಸುವುದಕ್ಕೆ ಆದ್ಯತೆ ನೀಡಿದ್ದಾರೆ.

ಗ್ರಾಮಗಳ ಮೂಲಸೌಕರ್ಯ ಅಭಿವೃದ್ಧಿಗೆ ಒತ್ತು

ಜಿಪಂ ಸದಸ್ಯರಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಕುಡಿಯುವ ನೀರಿನ ಘಟಕಗಳ ಸ್ಥಾಪನೆ, ಶಾಲಾ ಕಟ್ಟಡಗಳ ಅಭಿವೃದ್ಧಿ,

ರಸ್ತೆ ನಿರ್ಮಾಣ ಮತ್ತು ಸುಧಾರಣೆ, ಚರಂಡಿ ಕಾಮಗಾರಿಗಳು, ಮೇಲ್ಮಟ್ಟದ ನೀರಿನ ಟ್ಯಾಂಕ್‌ಗಳ ಅಭಿವೃದ್ಧಿ, ನೆಲಮಟ್ಟದ ನೀರಿನ ಸಂಗ್ರಹಾಗಾರಗಳ ನಿರ್ಮಾಣ ಹಾಗೂ ಹೈಮಾಸ್ಟ್ ದೀಪಗಳ ಅಳವಡಿಕೆಯಂತಹ ಮೂಲಸೌಕರ್ಯ ಕಾರ್ಯಗಳಿಗೆ ಒತ್ತು ನೀಡಿದ್ದರು.

ಇದರೊಂದಿಗೆ ಗ್ರಾಮೀಣ ಕ್ರೀಡಾಕೂಟಗಳ ಆಯೋಜನೆ, ಯುವಕರಿಗೆ ಪ್ರೋತ್ಸಾಹ ಹಾಗೂ ಕ್ರೀಡಾ ಚಟುವಟಿಕೆಗಳ ಉತ್ತೇಜನದ ಮೂಲಕ ಗ್ರಾಮೀಣ ಪ್ರತಿಭೆಗಳಿಗೆ ಅವಕಾಶ ಕಲ್ಪಿಸುವ ಪ್ರಯತ್ನಗಳನ್ನು ಮಾಡಿದ್ದಾರೆ. ಗ್ರಾಮಗಳ ಅಗತ್ಯಗಳನ್ನು ಗುರುತಿಸಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದು ಮತ್ತು ಜನರಿಗೆ ಅಗತ್ಯ ಸೌಲಭ್ಯಗಳನ್ನು ತಲುಪಿಸುವುದು ಅವರ ಸಾರ್ವಜನಿಕ ಸೇವೆಯ ಪ್ರಮುಖ ಭಾಗವಾಗಿದೆ.

ರಾಜಕೀಯ ಅನುಭವವೇ ಬಲ

ಪ್ರಸ್ತುತ ದೇವನಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಕೆ.ಸಿ.ಮಂಜುನಾಥ್ ಅವರು ಪಕ್ಷದ ಸಂಘಟನೆಯನ್ನು ಬಲಪಡಿಸುವುದು, ಮುಖಂಡರು ಮತ್ತು ಕಾರ್ಯಕರ್ತರೊಂದಿಗೆ ಸಮನ್ವಯ ಸಾಧಿಸುವುದು ಹಾಗೂ ಸ್ಥಳೀಯ ಮಟ್ಟದಲ್ಲಿ ಪಕ್ಷದ ಚಟುವಟಿಕೆಗಳನ್ನು ಮುನ್ನಡೆಸುವ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ. ಹಿಂದಿನ ಜಿಲ್ಲಾ ಪಂಚಾಯಿತಿ ಸದಸ್ಯತ್ವದ ಅನುಭವ ಮತ್ತು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ ಹಿನ್ನೆಲೆ ಅವರ ರಾಜಕೀಯ ಅನುಭವಕ್ಕೆ ಮತ್ತಷ್ಟು ಬಲ ನೀಡಿದೆ.

ಸ್ಥಳೀಯ ಸಮಸ್ಯೆಗಳ ಅರಿವು, ಗ್ರಾಮೀಣ ಅಭಿವೃದ್ಧಿಯ ಅಗತ್ಯಗಳ ಬಗ್ಗೆ ತಿಳಿವಳಿಕೆ, ಜನಪ್ರತಿನಿಧಿಯಾಗಿ ಕಾರ್ಯನಿರ್ವಹಿಸಿದ ಅನುಭವ ಹಾಗೂ ಪಕ್ಷದ ಸಂಘಟನೆಯಲ್ಲಿ ಹೊಂದಿರುವ ಜವಾಬ್ದಾರಿಯನ್ನು ಮುಂದಿಟ್ಟುಕೊಂಡು ಅವರು ಕನ್ನಮಂಗಲ ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ ಮತ್ತೊಮ್ಮೆ ಜನಸೇವೆ ಮಾಡಲು ಅವಕಾಶ ನಿರೀಕ್ಷಿಸುತ್ತಿದ್ದಾರೆ.

> ಕನ್ನಮಂಗಲ ಜಿಪಂ ಕ್ಷೇತ್ರದಿಂದ ಈ ಬಾರಿ ಅಭ್ಯರ್ಥಿಯಾಗಿ ಸ್ಪರ್ಧಿಸಲು ಅವಕಾಶ ನೀಡುವಂತೆ ಜಿಲ್ಲಾ ಉಸ್ತುವಾರಿ ಸಚಿವರು, ಪಕ್ಷದ ಹಿರಿಯ ನಾಯಕರು ಹಾಗೂ ಸಂಬಂಧಪಟ್ಟ ಮುಖಂಡರಲ್ಲಿ ಮನವಿ ಮಾಡಿದ್ದೇನೆ. ಪಕ್ಷದ ನಿಷ್ಠಾವಂತ ಕಾರ್ಯಕರ್ತರು, ಮುಖಂಡರು ಮತ್ತು ಕ್ಷೇತ್ರದ ಜನರ ಸಹಕಾರದೊಂದಿಗೆ ಕ್ಷೇತ್ರದ ಅಭಿವೃದ್ಧಿಗೆ ಇನ್ನಷ್ಟು ಪರಿಣಾಮಕಾರಿಯಾಗಿ ಶ್ರಮಿಸುವ ಆಶಯವಿದೆ. ಈಗಾಗಲೇ ಕನ್ನಮಂಗಲ ಕ್ಷೇತ್ರವ್ಯಾಪ್ತಿಯಲ್ಲಿ ಹಲವು ಜನಪರ ಕಾರ್ಯಕ್ರಮಗಳನ್ನು ನೀಡಲಾಗಿದೆ. ಜನರವಿಶ್ವಾಸ ಮತ್ತು ನಾಡಿ ಮಿಡಿತವನ್ನು ಅರಿತಿದ್ದು, ಕ್ಷೇತ್ರದ ಅಭಿವೃದ್ಧಿಗೆ ಮತ್ತಷ್ಟು ಕೊಡುಗೆ ನೀಡುವ ಉದ್ದೇಶ ಹೊಂದಿದ್ದು, ಕನ್ನಮಂಗಲ ಜಿಪಂ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸ್ಥಾನದ ಆಕಾಂಕ್ಷಿಯಾಗಿ ಸೇವೆ ಸಲ್ಲಿಸುವ ಅವಕಾಶದ ನಿರೀಕ್ಷೆಯಲ್ಲಿದ್ದೇನೆ.
>
> **- ಕೆ.ಸಿ.ಮಂಜುನಾಥ್ । ಆಕಾಂಕ್ಷಿ, ಜಿಪಂ ಕನ್ನಮಂಗಲ ಕ್ಷೇತ್ರ**

# ತುಮಕೂರು ದಸರಾ-2026 ಕ್ಕೆ ಸನ್ಮಾನ್ಯ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್‌ರಿಗೆ ಆಹ್ವಾನ



ತುಮಕೂರು(ಕ.ವಾ): ತುಮಕೂರು ದಸರಾ-2026ರ ಆಹ್ವಾನ ಪತ್ರಿಕೆಯನ್ನು ಬೆಂಗಳೂರಿನಲ್ಲಿ ಕರ್ನಾಟಕದ ಮಾನ್ಯ ಉಪಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ. ಶಿವಕುಮಾರ್ ಅವರಿಗೆ ಸಲ್ಲಿಸಿ, ದಸರಾ ಮಹೋತ್ಸವಕ್ಕೆ ಆತ್ಮೀಯವಾಗಿ ಆಹ್ವಾನಿಸಲಾಯಿತು.

ದಸರಾ 2026 ಕುರಿತಂತೆ ತುಮಕೂರು ಜಿಲ್ಲಾಡಳಿತದ ವತಿಯಿಂದ

ಅಕ್ಟೋಬರ್ 11ರಿಂದ 21ರವರೆಗೆ ಆಯೋಜಿಸಲಾಗಿರುವ ವಿವಿಧ

ಸಾಂಸ್ಕೃತಿಕ ಕಾರ್ಯಕ್ರಮಗಳ ಕುರಿತು ಜಿಲ್ಲಾಧಿಕಾರಿ ಶ್ರೀಮತಿ ಶುಭ ಕಲ್ಯಾಣ್ ಸನ್ಮಾನ್ಯರಿಗೆ ವಿವರ ನೀಡಿದರು. ಈ ಸಂದರ್ಭದಲ್ಲಿ ತುಮಕೂರು ಜಿಲ್ಲಾಧಿಕಾರಿ ಶ್ರೀಮತಿ ಶುಭ ಕಲ್ಯಾಣ್,

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಮತಿ ಅಶ್ವಿಜಾ ಬಿ.ವಿ., ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಅಶೋಕ್ ಕೆ.ವಿ., ಉಪಸ್ಥಿತರಿದ್ದರು.

# ಶಿರಾ ಪೊಲೀಸ್ ಇಲಾಖೆಯಿಂದ ಸಂಭ್ರಮದ ಗಣೇಶೋತ್ಸವ ಆಚರಣೆ



ಶಿರಾ: ನಗರದ ಪೊಲೀಸ್ ಇಲಾಖೆಯ ವತಿಯಿಂದ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಸಮ್ಮುಖದಲ್ಲಿ ಗಣೇಶೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಸರ್ಕಲ್ ಇನ್ಸ್ಪೆಕ್ಟರ್ ಪ್ರವೀಣ್ ಕುಮಾರ್ ಹಾಗೂ ಡಿವೈಎಸ್ಪಿ ಬಿ.ಕೆ. ಶೇಖರ್ ಸೇರಿದಂತೆ ಪೊಲೀಸ್ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗವಹಿಸಿ, ಗಣೇಶನಿಗೆ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳುವ ಮೂಲಕ ಹಬ್ಬದ ಸಂಭ್ರಮವನ್ನು ಹಂಚಿಕೊಂಡರು. ಗಣೇಶೋತ್ಸವದ ಸಂದರ್ಭದಲ್ಲಿ ನಗರದಾದ್ಯಂತ ಶಾಂತಿ, ಸುರಕ್ಷತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಹಗಲಿರುಳು ಕರ್ತವ್ಯ ನಿರ್ವಹಿಸಿದ ಪೊಲೀಸ್ ಸಿಬ್ಬಂದಿ,

ಈ ಕಾರ್ಯಕ್ರಮದ ಮೂಲಕ ಒಂದಾಗಿ ಸಂಭ್ರಮಿಸಿದರು. ಕರ್ತವ್ಯದ ಒತ್ತಡದ ನಡುವೆಯೂ ಸಹೋದ್ಯೋಗಿಗಳೊಂದಿಗೆ ಸಂತೋಷದ ಕ್ಷಣಗಳನ್ನು ಹಂಚಿಕೊಂಡು, ಪರಸ್ಪರ ಪ್ರೀತಿ, ವಿಶ್ವಾಸ ಹಾಗೂ ಸೌಹಾರ್ದತೆಯನ್ನು ಬಲಪಡಿಸಿದರು. ಜನರ ರಕ್ಷಣೆ ಮತ್ತು ಸಾರ್ವಜನಿಕರ ಸುರಕ್ಷತೆಯನ್ನೇ ಪ್ರಮುಖ ಕರ್ತವ್ಯವಾಗಿಸಿ ಕೊಂಡಿರುವ ಪೊಲೀಸ್ ಸಿಬ್ಬಂದಿ, ನಾಡಿನ ಸಂಪ್ರದಾಯ ಹಾಗೂ ಸಂಸ್ಕೃತಿಗೆ ಗೌರವ ನೀಡುವ ಮೂಲಕ ಗಣೇಶೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಿದರು. ಈ ಆಚರಣೆಯು ಪೊಲೀಸ್ ಇಲಾಖೆಯಲ್ಲಿನ ಒಗ್ಗಟ್ಟು, ಸಹಬಾಳ್ವೆ ಹಾಗೂ ಸ್ನೇಹಭಾವಕ್ಕೆ ಸಾಕ್ಷಿಯಾಯಿತು.

# ಮುಖ್ಯಮಂತ್ರಿಗಳ ತಾಂತ್ರಿಕ ಸಲಹೆಗಾರರಾಗಿ ಡಾ|| ಕೆ. ಜೈಪ್ರಕಾಶ್ ನೇಮಕ

ತುಮಕೂರು(ಕ.ವಾ)ಅ.10: ಮೂಲತಃ ತುಮಕೂರಿನವರಾದ ರಾಜ್ಯ ಸರ್ಕಾರದ ನಿವೃತ್ತ



ಕಾರ್ಯದರ್ಶಿ ಹಾಗೂ ಹಿರಿಯ ಆಡಳಿತಾಧಿಕಾರಿ ಡಾ: ಕೆ. ಜೈಪ್ರಕಾಶ್ ಅವರನ್ನು ಕರ್ನಾಟಕದ ಮಾನ್ಯ ಮುಖ್ಯಮಂತ್ರಿಗಳ ತಾಂತ್ರಿಕ ಸಲಹೆಗಾರರನ್ನಾಗಿ ನೇಮಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಆದೇಶ ಹೊರಡಿಸಿದೆ.

ಡಾ: ಜೈಪ್ರಕಾಶ್ ಅವರು ಈ ಹಿಂದೆ ಎಂಜಿನಿಯರ್-ಇನ್-ಚೀಫ್, ಮುಖ್ಯ ಎಂಜಿನಿಯರ್ (ಅ&ಃ ದಕ್ಷಿಣ, ರಾಷ್ಟ್ರೀಯ ಹೆದ್ದಾರಿಗಳು) ಸೇರಿದಂತೆ ವಿವಿಧ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಾರ್ಯನಿರ್ವಹಿಸಿರುವ ಇವರು, ವಿಶ್ವೇಶ್ವರಯ್ಯ ಜಲ ನಿಗಮ ಹಾಗೂ ಕಾವೇರಿ ನೀರಾವರಿ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರಾಗಿಯೂ ಸೇವೆ ಸಲ್ಲಿಸಿದ್ದಾರೆ.

ಬಯಲುಸೀಮೆ ಜಿಲ್ಲೆಗಳ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ಮಹತ್ವಾಕಾಂಕ್ಷೆಯ ಯೋಜನೆಗಳ ಅನುಷ್ಠಾನದಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ. ಜಲಸಂಪನ್ಮೂಲ ಕ್ಷೇತ್ರದಲ್ಲಿ ಅಪಾರ ಆಡಳಿತಾತ್ಮಕ ಅನುಭವ ಮತ್ತು ತಾಂತ್ರಿಕ ಪರಿಣತಿ ಹೊಂದಿರುವ ಜೈಪ್ರಕಾಶ್ ಅವರು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ತಾಂತ್ರಿಕ ಸಲಹೆಗಾರರಾಗಿಯೂ ಕಾರ್ಯನಿರ್ವಹಿಸಿದ್ದಾರೆ.

ಈ ನೇಮಕಾತಿಯು ತಕ್ಷಣದಿಂದ ಜಾರಿಗೆ ಬರಲಿದ್ದು, ಮುಖ್ಯಮಂತ್ರಿಗಳ ಅಧಿಕಾರಾವಧಿ ಮುಗಿಯುವವರೆಗೆ ಅಥವಾ ಮುಂದಿನ ಆದೇಶದವರೆಗೆ ಅವರು ಈ ಹುದ್ದೆಯಲ್ಲಿ ಕಾರ್ಯನಿರ್ವಹಿಸಲಿದ್ದಾರೆ.

# ದಸರಾ ಉತ್ಸವ : ಇಂದು ಧಾರ್ಮಿಕ, ಸಾಂಸ್ಕೃತಿಕ ಹಾಗೂ ಮನರಂಜನಾ ಕಾರ್ಯಕ್ರಮಗಳಿಗೆ ವಿದ್ಯುಕ್ತ ಚಾಲನೆ

ತುಮಕೂರು(ಕ.ವಾ): ಜಿಲ್ಲಾಡಳಿತದ ವತಿಯಿಂದ ಅಕ್ಟೋಬರ್ 11 ರಿಂದ 21ರವರೆಗೆ ಒಟ್ಟು 11 ದಿನಗಳ ಕಾಲ ಹಮ್ಮಿಕೊಂಡಿರುವ ತುಮಕೂರು ದಸರಾ ಉತ್ಸವಕ್ಕೆ ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಬೆಳಗ್ಗೆ 9 ಗಂಟೆಗೆ ವಿದ್ಯುಕ್ತವಾಗಿ ಚಾಲನೆ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಬೆಳಗ್ಗೆ 9ಕ್ಕೆ ಧಾರ್ಮಿಕ ಉತ್ಸವಃ

ದಸರಾ ಉತ್ಸವದ ಅಂಗವಾಗಿ ನಗರದಲ್ಲಿ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಮನರಂಜನಾ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುವುದು. ಮೊದಲನೇ ದಿನವಾದ ಅಕ್ಟೋಬರ್ 11ರಂದು ಬೆಳಗ್ಗೆ 9 ಗಂಟೆಗೆ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಧಾರ್ಮಿಕ ಉತ್ಸವಗಳ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಧಾರ್ಮಿಕ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಸಿದ್ದಗಂಗಾ ಮಠದ ಶ್ರೀ ಶ್ರೀ ಶ್ರೀ ಸಿದ್ಧಲಿಂಗ ಮಹಾಸ್ವಾಮಿ, ಎಲೆರಾಂಪುರ ಶ್ರೀ ಕುಂಚಿಟಿಗರ ಮಹಾಸಂಸ್ಥಾನ ಮಠದ ಶ್ರೀ ಶ್ರೀ ಶ್ರೀ ಡಾ: ಹನುಮಂತನಾಥ ಮಹಾಸ್ವಾಮೀಜಿ, ಸುಕ್ಷೇತ್ರ ಸಿದ್ದರಬೆಟ್ಟ ಬಾಳೆಹೊನ್ನೂರು ಮಠದ ಶ್ರೀ ಷ: ಬ್ರ: ವೀರಭದ್ರ ಶಿವಾಚಾರ್ಯ ಹಾಗೂ ಬೆಳ್ಳಾವಿ ಶ್ರೀ ಕಾರದೇಶ್ವರ ಮಠದ ಶ್ರೀ ಶ್ರೀ ಶ್ರೀ ಕಾರದ ವೀರಬಸವ ಮಹಾಸ್ವಾಮಿಗಳು ವಹಿಸಲಿದ್ದಾರೆ. ಉಪಮುಖ್ಯಮಂತ್ರಿ ಡಾ: ಜಿ. ಪರಮೇಶ್ವರ ಹಾಗೂ ಸಂಸದ ವಿ. ಸೋಮಣ್ಣ ಅವರ ಉಪಸ್ಥಿತಿಯಲ್ಲಿ ಶಾಸಕ ಜಿ.ಬಿ. ಜ್ಯೋತಿಗಣೇಶ್ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ಜರುಗಲಿದೆ.

ವಿವಿಧ ಕಾರ್ಯಕ್ರಮಗಳಿಗೆ ಚಾಲನೆಃ

ನಂತರ ಬೆಳಗ್ಗೆ 10-30 ಗಂಟೆಗೆ ಇದೇ ಕಾಲೇಜು ಮೈದಾನದಲ್ಲಿ ವಸ್ತು ಪ್ರದರ್ಶನ & ಆಕರ್ಷಕ ಫಲ ಪುಷ್ಪ ಪ್ರದರ್ಶನಕ್ಕೆ ಚಾಲನೆ ನೀಡಲಾಗುವುದು. ನಂತರ ಬೆಳಗ್ಗೆ 11 ಗಂಟೆಗೆ ತುಮಕೂರು ವಿ.ವಿ. ಆವರಣದಲ್ಲಿ ಹೆಲಿರೈಡ್, 11-30 ಗಂಟೆಗೆ ನಗರದ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ತುಮಕೂರು ರಂಗ ದಸರಾ ನಾಟಕೋತ್ಸವ, ಮಧ್ಯಾಹ್ನ 3ಕ್ಕೆ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ತುಮಕೂರು ದಸರಾ ಸಾಂಸ್ಕೃತಿಕ ವೈಭವ ಸಂಜೆ 7ಕ್ಕೆ ಬಿಜಿಎಸ್ ವೃತ್ತದಲ್ಲಿ ದಸರಾ ವಿಶೇಷ ದೀಪಾಲಂಕಾರ & ಅಂಬಾರಿ ಬಸ್, ಸಂಜೆ 7-30ಕ್ಕೆ ಅಮಾನಿಕೆರೆ ಆವರಣದಲ್ಲಿ ತುಮಕೂರು ಕಾರಂಜಿ, ರಾತ್ರಿ 8 ಗಂಟೆಗೆ ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮೀಜಿ ವೃತ್ತದಲ್ಲಿ ತುಮಕೂರು ಸ್ಕ್ವೇರ್ ಉದ್ಘಾಟನೆ ಹಾಗೂ ಕ್ರಿಪ್ಟೋಸ್ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು.

ಸಾಂಸ್ಕೃತಿಕ ವೈಭವಃ

ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಮಧ್ಯಾಹ್ನ 3 ಗಂಟೆಯಿಂದ ನಡೆಯಲಿರುವ ತುಮಕೂರು ದಸರಾ ಸಾಂಸ್ಕೃತಿಕ ವೈಭವ ಕಾರ್ಯಕ್ರಮದಲ್ಲಿ ಸ್ಥಳೀಯ ಕಲಾವಿದರಾದ ಶ್ರೀ ಸಪ್ತಗಿರಿ ಪಿಯು ಕಾಲೇಜಿನ ವಿದ್ಯಾರ್ಥಿಗಳಿಂದ ಕೋಲಾಟ; ತುಮಕೂರು ವಿವಿ ಕಾಲೇಜಿನ ವಿದ್ಯಾರ್ಥಿಗಳಿಂದ ಭಾರತೀಯ ಜಾನಪದ ನೃತ್ಯ ವೈಭವ; ಕುಸುಮಾ ಜೈನ್ ಮತ್ತು ತಂಡದಿಂದ ಕರ್ನಾಟಕ ಸಂಗೀತ; ಮೋಹನ್ ಕುಮಾರ್ ಮತ್ತು ತಂಡದಿಂದ ಹಲಗು ಕುಣಿತ; ಕರ್ನಾಟಕ ರಾಜ್ಯ ಕಲಾವಿದರ ಒಕ್ಕೂಟದಿಂದ ಜಾನಪದ ಸಂಗಮ; ಮಂಜಣ್ಣ ಎಲ್ ಮತ್ತು ತಂಡದಿಂದ ಭಕ್ತಿ ಸಂಗೀತ; ಸಂಜೆ 6 ಗಂಟೆಯಿಂದ ಬೆಂಗಳೂರಿನ ಶಿವಲೀಲ ಕಲ್ಚರಲ್ ಟ್ರಸ್ಟ್ ವತಿಯಿಂದ ಸಿರಿಗನ್ನಡಂ ಗೆಲ್ಗೆ-ನೃತ್ಯ ನಾಟಕ; ಸಂಜೆ 7.30 ರಿಂದ ಸಾಯಿರಾಮನ್ ನೃತ್ಯ ಕೇಂದ್ರದಿಂದ ಶಿವತಾಂಡವ-ನೃತ್ಯ ರೂಪಕ, ಡಾಃ ಲಕ್ಷ್ಮಣದಾಸ್ ಮತ್ತು ತಂಡದಿಂದ ಕಥಾಕೀರ್ತನ ಹಾಗೂ ಪಾವಗಡ ತಾಲೂಕು ಟಿ. ಗಂಗಯ್ಯ ಮತ್ತ ತಂಡದಿಂದ ರಾಮಾಂಜನೇಯ ಯುದ್ಧ-ಯಕ್ಷಗಾನ ಬಯಲಾಟ ಪ್ರದರ್ಶನ ನಡೆಯಲಿದೆ ಎಂದು ಅವರು ತಿಳಿಸಿದ್ದಾರೆ.

ನಗರದಲ್ಲಿ ಅ.11 ರಿಂದ 21ರವರೆಗೆ 11 ದಿನಗಳ ಕಾಲ ನಡೆಯಲಿರುವ ತುಮಕೂರು ದಸರಾ ಉತ್ಸವ ಕಾರ್ಯಕ್ರಮದಲ್ಲಿ ಜಿಲ್ಲೆಯ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿ ಮನವಿ ಮಾಡಿದ್ದಾರೆ.

# ಗರುಗದೊಡ್ಡಿಯಲ್ಲಿ ಸ್ವಚ್ಛತಾ ಪಖ್ವಾಡ್ ಕಾರ್ಯಕ್ರಮ ಯಶಸ್ವಿ



ಕೊರಟಗೆರೆ: ಮೈ ಭಾರತ್ ಮೇರಾ ಯುವ ಭಾರತ್ ತುಮಕೂರು, ವಡ್ಡಗೆರೆ ಗ್ರಾಮ ಪಂಚಾಯ್ತಿ ಕಾರ್ಯಾಲಯದ ಸಂಯುಕ್ತಾಶ್ರಯದಲ್ಲಿ ಶ್ರಮದಾನದ ಮೂಲಕ ತಾಲ್ಲೂಕಿನ ಗರುಗದೊಡ್ಡಿ ಗ್ರಾಮದಲ್ಲಿ (ಅ.10) ಶನಿವಾರ ಚರಂಡಿ, ರಸ್ತೆ, ಅಂಗನವಾಡಿ, ಶಾಲಾ ಆವರಣ, ದೇವಸ್ಥಾನ, ಹರಿಜನ ಕಾಲೋನಿಗಳ ಸ್ವಚ್ಚತಾ ಪಖ್ವಾಡ್ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಸ್ವಚ್ಚತೆಯಲ್ಲಿ ಸಹಭಾಗಿತ್ವ, ಸ್ವಚ್ಚ ಭಾರತ್ ವಿಕಸಿತ ಭಾರತ ಎಂಬ ಘೋಷಣೆಯೊಂದಿಗೆ ಪ್ರಬಂಧ ಸ್ಪರ್ಧೆ, ಭಾಷಣ ಸ್ಪರ್ಧೆಗಳನ್ನು ಶಾಲಾ ಮಕ್ಕಳಿಗೆ ಆಯೋಜಿಸಲಾಗಿತ್ತು.

ನಂತರ ವಡ್ಡಗೆರೆ ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಗ್ರಾಮಸ್ಥರ ಸಹಕಾರದೊಂದಿಗೆ ಗ್ರಾಮವನ್ನು ಸ್ವಚ್ಚಗೊಳಿಸಲಾಯಿತು. ಗರುಗದೊಡ್ಡಿ ಗ್ರಾಮದಲ್ಲಿ ರಸ್ತೆ ಒತ್ತುವರಿ ಹಾಗೂ ಕುಡಿಯುವ ನೀರಿನ ಸಮಸ್ಯೆಗಳನ್ನು ಗ್ರಾಮಸ್ಥರ ಜೊತೆ ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ರಘುನಂದನ್ ಚರ್ಚೆ ನಡೆಸಿ ಬಗೆ ಹರಿಸಿದರು.

ಗರುಗದೊಡ್ಡಿ ಗ್ರಾಮದ ಆದಿದ್ರಾವಿಡ ಸಮುದಾಯಕ್ಕೆ ಸೇರಿದ ಕುಡಿಯುವ ನೀರಿನ ಬಾವಿಯನ್ನು ಸ್ವಚ್ಚಗೊಳಿಸಿ ಇದಕ್ಕೆ ಸಂಬಂಧಿಸಿದ 8 ಗುಂಟೆ ಜಮೀನನ್ನು ಗುರುತಿಸಿ ಸುತ್ತಲೂ ಮುಳ್ಳಿನ ಕಲ್ಲು ಬೇಲಿಯನ್ನು ಅಳವಡಿಸುವಂತೆ ತಿಳಿಸಿದರು.

ಈ ವೇಳೆ ಮಾತನಾಡಿದ ಗ್ರಾಮದ ಮುಖಂಡ ಜಿ.ವಿ.ವೀರೇಂದ್ರ ಪ್ರಸಾದ್, ಸ್ವಚ್ಛ ಮತ್ತು ಆರೋಗ್ಯಕರ ಕೆಲಸದ ವಾತಾವರಣವನ್ನು ಕಾಪಾಡಿಕೊಳ್ಳಲು ಸ್ಥಿರವಾದ ವೈಯಕ್ತಿಕ ಮತ್ತು ಸಾಮೂಹಿಕ ಪ್ರಯತ್ನಗಳು ಅತ್ಯಗತ್ಯ ಎಂದು ಹೇಳಿದರು.

ಸ್ವಚ್ಛತೆ ಮತ್ತು ಪರಿಸರ ಜಾಗೃತಿಯನ್ನು ಉತ್ತೇಜಿಸುವ ಹಾಗೂ ಸ್ವಚ್ಛ ಮತ್ತು ಆರೋಗ್ಯಕರ ಪರಿಸರವನ್ನು ಕಾಪಾಡುವಲ್ಲಿ ವಿದ್ಯಾರ್ಥಿ ಮತ್ತು ನಾಗರೀಕರ ಜವಾಬ್ದಾರಿಯ ಭಾವನೆಯನ್ನು ಬೆಳೆಸುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರಘುನಂದನ್ ಮಾತನಾಡಿ, ಶಾಲಾ ಆವರಣ, ದೇವಸ್ಥಾನ, ಅಂಗನವಾಡಿ, ರಸ್ತೆ, ಚರಂಡಿ, ಹರಿಜನ ಕಾಲೋನಿಗಳಲ್ಲಿ ಸಮಗ್ರ ಸ್ವಚ್ಛತಾ ಅಭಿಯಾನದಲ್ಲಿ ತೊಡಗಿಸಿಕೊಂಡ್ಡಿದ್ದು ಶ್ಲಾಘನೀಯ ಎಂದರು.

ಇದು ಸ್ವಚ್ಛತೆಯ ಮಹತ್ವದ ಕುರಿತು ಅರಿವು ಮೂಡಿಸುವುದಲ್ಲದೆ, ಸ್ವಚ್ಛ ಮತ್ತು ಆರೋಗ್ಯಕರ ಪರಿಸರವನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಸಕ್ರಿಯ ಕ್ರಮಗಳನ್ನು ಕೈಗೊಳ್ಳಲು ಪ್ರೋತ್ಸಾಹಿಸಿತು.

ಇದೇ ವೇಳೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರಘುನಂದನ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಕಾರ್ಯಕ್ರಮದಲ್ಲಿ ಜಿ.ವಿ.ವೀರೇಂದ್ರ ಪ್ರಸಾದ್, ಜಿ.ವಿ.ನಾಗೇಂದ್ರ ಕುಮಾರ್, ನಿವೃತ್ತ ಕೃಷಿ ಅಧಿಕಾರಿ ಹನುಮಂತರಾಯಪ್ಪ, ಜಿ.ಟಿ.ವೆಂಕಟೇಶ್ವರ್, ಸೇರಿದಂತೆ ಗ್ರಾಮದ ಯುವಕರು, ಗ್ರಾಮದ ಮುಖಂಡರು, ಪಂಚಾಯಿತಿಯ ಎಲ್ಲಾ ನೀರು ವಿತರಕರು ಭಾಗವಹಿಸಿದ್ದರು.

# ಬೇಡ್ತಿ-ಅಘನಾಶಿನಿ ನದಿಗಳ ಉಳಿವಿಗಾಗಿ ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ

## ಡಿಪಿಎಆರ್ ರದ್ದುಪಡಿಸಲು ಆಗ್ರಹ: ಸಭೆಯಲ್ಲಿ 11 ಪ್ರಮುಖ ನಿರ್ಣಯಗಳ ಅಂಗೀಕಾರ





ಬೆಂಗಳೂರು: ಉತ್ತರ ಕನ್ನಡದ ಜೀವ ನದಿಗಳಾದ ಬೇಡ್ತಿ-ಅಘನಾಶಿಸಿನಿ ಉಳಿವಿಗಾಗಿ ರಾಜಧಾನಿ ಬೆಂಗಳೂರಿನಲ್ಲಿ ಶನಿವಾರ ನಡೆದ ಬೃಹತ್ ಪ್ರತಿಭಟನಾ ಸಭೆಯಲ್ಲಿ 11 ಪ್ರಮುಖ ನಿರ್ಧಾರಗಳನ್ನು ಒಕ್ಕೊರಲಿನಿಂದ ತೆಗೆದುಕೊಳ್ಳಲಾಗಿದೆ.

ಬೇಡ್ತಿ-ಅಘನಾಶಿನಿ ಕೊಳ್ಳ ಸಂರಕ್ಷಣಾ ಸಮಿತಿಯ ನೇತೃತ್ವದಲ್ಲಿ ನಡೆದ ಜನಾಕ್ರೋಶದ ಸಭೆಯಲ್ಲಿ ಬೆಂಗಳೂರಿನಲ್ಲಿರುವ ಸಾವಿರಾರು ಉತ್ತರ ಕನ್ನಡದ ಮಂದಿ ಭಾಗವಹಿಸಿದ್ದರು. ಈ ಮೂಲಕ ಯೋಜನೆಗೆ ಸಂಬಂಧಿಸಿ ಸರ್ಕಾರದ ಕಡೆಯಿಂದ ನಡೆಯುತ್ತಿರುವ ಡಿಪಿಎಆರ್‌ನ್ನು ಕೂಡಲೇ ರದ್ದುಪಡಿಸಿ, ಉತ್ತರ ಕನ್ನಡದ ನದಿಗಳು ಹಾಗೂ ಜನರ ಜೀವ ಸಂರಕ್ಷಿಸಬೇಕು ಎನ್ನುವ ನಿರ್ಣಯ ಕೈಗೊಂಡರು.

ಪ್ರತಿಭಟನಾ ಸಭೆಯಲ್ಲಿ ನಿವೃತ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ, ಶಾಸಕರಾದ ಭೀಮಣ್ಣ ನಾಯ್ಕ್, ಪರಿಸರ ಹೋರಾಟಗಾರ ಯಲ್ಲಪ್ಪ ರೆಡ್ಡಿ, ವಿಜ್ಞಾನಿ ಟಿ.ವಿ ರಾಮಚಂದ್ರ, ಕಡಲಜೀವಿ ಶಾಸ್ತ್ರಜ್ಞ ಎ.ಎನ್ ನಾಯಕ್, ಶ್ರೀ ಅಖಿಲ ಹವ್ಯಕ ಮಹಾಸಭಾ ಅಧ್ಯಕ್ಷ ಗಿರಿಧರ ಕಜೆ, ಸಾಹಿತಿ ಜಯಂತ್ ಕಾಯ್ಕಿಣಿ, ಹಿರಿಯರಾದ ತೇಜಸ್ವಿನಿ ಅನಂತ್‌ಕುಮಾರ್, ಶಾಂತಾರಾಮ ಸಿದ್ಧಿ, ನಟರಾದ ನೀರ್ನಳ್ಳಿ ರಾಮಕೃಷ್ಣ, ಶಂಕರ್ ಭಟ್, ನಟಿ ಲಕ್ಷ್ಮೀ ಹೆಗಡೆ ಅರವಿಂದ ನಾಯಕ್, , ನೀರಾವರಿ ತಜ್ಞರಾದ ವಿ.ಆರ್. ಹೆಗಡೆ, ಶ್ರೀನಿವಾಸ ರೆಡ್ಡಿ, ಟಿಎಸ್‌ಎಸ್ ಅಧ್ಯಕ್ಷ ಗೋಪಾಲಕೃಷ್ಣ ವೈದ್ಯ, ಸಾಮಾಜಿಕ ಹೋರಾಟಗಾರ್ತಿ ಸುಷ್ಮಾ ರೆಡ್ಡಿ, ಬೇಡ್ತಿ-ಅಘನಾಶಿನಿ ಕೊಳ್ಳ ಸಂರಕ್ಷಣಾ ಸಮಿತಿಯ ಬೆಂಗಳೂರು ವಿಭಾಗದ ಪ್ರಮುಖರಾದ ಎಸ್.ಎಂ ಹೆಗಡೆ, ಸ್ವರ್ಣವಲ್ಲೀ ಮಠದ ಆಡಳಿತ ಮಂಡಳಿ ಅಧ್ಯಕ್ಷ ಡಾ. ಸತೀಶ ಹೆಗಡೆ ಹುಳಗೋಳ, ಸಿದ್ದಾಪುರ ಟಿಎಂಎಸ್ ಅಧ್ಯಕ್ಷ ಆರ್.ಎಂ.ಹೆಗಡೆ ಬಾಳೇಸರ, ಸಂಘಟಕ ನರಸಿಂಹ ಹೆಗಡೆ, ಯಲ್ಲಾಪುರದ ಧುರೀಣ ವಿವೇಕ ಹೆಬ್ಬಾರ ಸೇರಿ ಇತರ ಗಣ್ಯರು ಪ್ರತಿಭಟನೆಗೆ ಸಾಥ್ ನೀಡಿದರು.

# ದೆಹಲಿ ಪೊಲೀಸರ ಅನಾಗರೀಕ ವರ್ತನೆಯನ್ನು ಖಂಡಿಸಿ ಭಾಗ್ಯನಗರದಲ್ಲಿ ಮೇಣದ ಬತ್ತಿಗಳೊಂದಿಗೆ ಪ್ರತಿಭಟನೆ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಭಾಗ್ಯನಗರ:** ದೆಹಲಿ ಪೊಲೀಸರು ರಾಜಕೀಯ ಪಕ್ಷಗಳು, ನಾಗರಿಕ ಸಮಾಜದ ಸಂಘಟನೆಗಳು, ವಿದ್ಯಾರ್ಥಿಗಳು ಮತ್ತು ಯುವಜನರ ನೂರಾರು ನಾಯಕರನ್ನು ಬಂಧಿಸಲು ಅಮಾನವೀಯ ಮತ್ತು ಕ್ರೂರತನದಿಂದ ಕೂಡಿದ ರೀತಿಯಲ್ಲಿ ನಡೆದುಕೊಂಡಿದ್ದನ್ನು ಖಂಡಿಸಿ ಪಟ್ಟಣದಲ್ಲಿ ಸಿಪಿಎಂ ಮತ್ತು ಡಿವೈಎಫ್ಐ ನೇತೃತ್ವದಲ್ಲಿ ಮೇಣದಬತ್ತಿಗಳನ್ನು ಹಿಡಿದು ಪ್ರತಿಭಟಿಸಲಾಯಿತು.

ಮೇಣದ ಬತ್ತಿಗಳೊಂದಿಗೆ ಮುಖ್ಯರಸ್ತೆಯಲ್ಲಿ ಆಗಮಿಸಿದ ಪ್ರತಿಭಟನಾಕಾರರು ಜಿವಿಎಸ್ ಪುತ್ಥಳ ಮುಂಭಾಗದಲ್ಲಿ ಕೇಂದ್ರ ಸರ್ಕಾರಕ್ಕೆ ಧಿಕ್ಕಾರಗಳನ್ನು ಕೂಗಿದರು.

ಸಿಪಿಐಎಂ ತಾಲ್ಲೂಕು ಕಾರ್ಯದರ್ಶಿ ಎಂ.ಎನ್.ರಘುರಾಮರೆಡ್ಡಿ ಮಾತನಾಡಿ, ಸಿಪಿಎಂ ಪ್ರಧಾನ ಕಾರ್ಯದರ್ಶಿ ಎಂ.ಎ.ಬೇಬಿ ಹಾಗೂ ಇತರ ಹಿರಿಯ ಪೊಲಿಟ್ ಬ್ಯೂರೋ ಮತ್ತು ಕೇಂದ್ರ ಸಮಿತಿ ಸದಸ್ಯರು ಸೇರಿದಂತೆ ಪಕ್ಷದ ಬಹುತೇಕ ಸಂಪೂರ್ಣ ನಾಯಕತ್ವವನ್ನು ಪೊಲೀಸರು ದಸ್ತಗಿರಿ ಮಾಡಿದರು.

ಬಂಧಿತರಲ್ಲಿ ಅನೇಕರೊಂದಿಗೆ ಪೊಲೀಸರು ಒರಟಾಗಿ ವರ್ತಿಸಿದರು, ಹಲ್ಲೆನಡೆಸಿದರು. ಇದರಿಂದಾಗಿ ಸಂಸದ ಶಿವದಾಸನ್, ಜಾನ್ ಬ್ರಿಟ್ಟಾಸ್ ಅವರಂತಹ ಕೆಲವರಿಗೆ ಗಾಯಗಳಾದವು.

ಪೊಲಿಟ್ ಬ್ಯೂರೋ ಸದಸ್ಯ ಮತ್ತು ಕೇರಳದ ವಿಪಕ್ಷದ ನಾಯಕ ಕಾಮ್ರೇಡ್ ಪಿಣರಾಯಿ ವಿಜಯನ್, ಹಾಗೂ ಕೇಂದ್ರ ಸಮಿತಿ ಸದಸ್ಯರಾದ ಕೆ.ಎನ್. ಬಾಲಗೋಪಾಲ್ ಮತ್ತು ಜಾನ್ ಬ್ರಿಟ್ಟಾಸ್ ಅವರನ್ನು ಗಂಟೆಗಟ್ಟಲೆ ಪೊಲೀಸ್ ವಾಹನದಲ್ಲಿಯೇ ಕೂಡಿಹಾಕಲಾಗಿತ್ತು.

ಅವರಿಗೆ ಆಹಾರ, ನೀರು ನಿರಾಕರಿಸಲಾಯಿತು ಮತ್ತು ಅಗತ್ಯ ಔಷಧಿಗಳನ್ನು ತೆಗೆದುಕೊಳ್ಳಲು ಕೂಡ ಅವಕಾಶ ನೀಡಲಿಲ್ಲ. ಮೌರ್ಯ ಎನ್‌ಕ್ಲೇವ್ ಪೊಲೀಸ್ ಠಾಣೆಗೆ ಕರೆದೊಯ್ಯಲಾದ ಮಹಿಳಾ ಪ್ರತಿಭಟನಾಕಾರರ ಗುಂಪಿಗೆ ಶೌಚಾಲಯವನ್ನು ಬಳಸಲು ಕೂಡ ಅವಕಾಶ ನೀಡಲಿಲ್ಲ.

ಈ ಗುಂಪಿನಲ್ಲಿ ಪೊಲಿಟ್ ಬ್ಯೂರೋ ಸದಸ್ಯೆ ಮರಿಯಮ್ ಧವಳೆ ಕೂಡ ಇದ್ದರು. ಸಂಸದ ಎ.ಎ. ರಹೀಮ್ ಸೇರಿದಂತೆ ಹಲವು ಮುಖಂಡರುಗಳ ಮೊಬೈಲ್ ಫೋನ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿರುವುದು ಖಂಡನೀಯ ಎಂದರು.

ಡಿವೈಎಫ್ ಜಿಲ್ಲಾ ಅಧ್ಯಕ್ಷ ಎಸ್. ರಾಜಶೇಖರ ಮಾತನಾಡಿ ಪ್ರತಿಭಟನಾಕಾರರ ವಿರುದ್ಧ ಪ್ರಭುತ್ವದ ಸಂಪೂರ್ಣ ಬಲವನ್ನು ಭಾರೀ ಭದ್ರತಾ ನಿಯೋಜನೆ, ರಸ್ತೆಗಳಲ್ಲಿ ಬ್ಯಾರಿಕೇಡ್‌ಗಳ ನಿರ್ಮಾಣ ಹಾಗೂ ಸಂಚಾರ ಮತ್ತು ಸಂವಹನದ ಮೇಲೆ ಕಠಿಣ ನಿರ್ಬಂಧಗಳನ್ನು ಹೇರುವ ಮೂಲಕ ಪ್ರಯೋಗಿಸಲಾಯಿತು.

ಇವೆಲ್ಲವೂ ಶಾಂತಿಯುತವಾಗಿ ಪ್ರತಿಭಟಿಸುವ ಪ್ರಜಾಸತ್ತಾತ್ಮಕ ಹಕ್ಕುಗಳು ಮತ್ತು ಸಾಂವಿಧಾನಿಕ ಸ್ವಾತಂತ್ರ್ಯಗಳ ಮೇಲಿನ ನಾಚಿಕೆಗೆಟ್ಟ ದಾಳಿಯಾಗಿದ್ದು, ಸರ್ವಾಧಿಕಾರಿ ಧೋರಣೆಯ ನಿರ್ಲಜ್ಜ ಪ್ರದರ್ಶನವಾಗಿದೆ ಎಂದು ಕಿಡಿಕಾರಿದರು.

ಸರ್ಕಾರದ ಈ ಪ್ರತಿಕ್ರಿಯೆಯು, ಜನಗಳು ಸಜ್ಜುಗೊಳ್ಳುತ್ತಿರುವುದನ್ನು ಕಂಡು ಅದು ಭಯಗ್ರಸ್ತವಾಗಿದೆ ಎಂಬುದನ್ನು ಮತ್ತು ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದ ಗಂಭೀರ ಪ್ರಶ್ನೆಗಳಿಗೆ ಉತ್ತರಿಸುವ ಬದಲು ಭಿನ್ನಮತವನ್ನುದಮನ ಮಾಡುವ ಅದರ ದೃಢ ನಿರ್ಧಾರವನ್ನು ಬಯಲಿಗೆಳೆದಿದೆ ಎಂದರು.

ಈ ಸಂದರ್ಭದಲ್ಲಿ ಸಿಪಿಐಎಂ ಪಕ್ಷದ ಮುಖಂಡರಾದ ಮುನಿವೆಂಕಟಪ್ಪ ಎಂ.ಪಿ, ಚನ್ನರಾಯಪ್ಪ, ಡಿ.ಟಿ. ಮುನಿಸ್ವಾಮಿ, ಅಶ್ವತ್ಥನಾರಾಯಣ,

ಜಿ. ಕೃಷ್ಣಪ್ಪ, ರಫೀಕ್ ಮುನಿಯಪ್ಪ ಡಿವೈಎಫ್ ಮುಖಂಡರಾದ ಗಣೇಶ, ಇಮ್ರಾನ್, ಮೋಹಿದ್ದೀನ್, ರೈಜುಲ್, ಅಜ್ಮತ್, ರಿಜ್ವಾನ್ ಮುಂತಾದವರು ಭಾಗವಹಿಸಿದ್ದರು.

# ಯುಪಿಎಸ್‌ಗೆ ಡಿಸ್ಟಿಲ್ಡ್ ವಾಟರ್ ತುಂಬುವಾಗ ವಿದ್ಯುತ್ ಸ್ಪರ್ಶ-ಸಿವಿಲ್ ಇಂಜಿನಿಯರ್ ಬಲಿ!

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ವಿಧಿಯಾಟಕ್ಕೆ ಬಲಿಯಾದ ಯುವಕನೊಬ್ಬ ಸಾವಿನಲ್ಲೂ ಮಾನವೀಯತೆ ಮೆರೆದಿದ್ದಾನೆ. ಯುಪಿಎಸ್‌ಗೆ ಡಿಸ್ಟಿಲ್ಡ್ ವಾಟರ್ ತುಂಬಿಸುವ ಸಂದರ್ಭದಲ್ಲಿ ವಿದ್ಯುತ್ ಶಾಕ್ ಹೊಡೆದು 33 ವರ್ಷದ ಸಿವಿಲ್ ಇಂಜಿನಿಯರ್ ಮೃತಪಟ್ಟಿದ್ದಾರೆ. ಆದರೆ ಸಾವಿನ ನಂತರವೂ ಅಂಗಾಂಗ ದಾನ ಮಾಡುವ ಮೂಲಕ ಮತ್ತೊಂದು ಜೀವಕ್ಕೆ ಆಸರೆಯಾಗಿದ್ದಾರೆ. ಇತ್ತ, ಕುಟುಂಬಕ್ಕೆ ಆಧಾರವಾಗಿದ್ದ ಮಗನನ್ನು ಕಳೆದುಕೊಂಡ ತಾಯಿಯ ಆಕ್ರಂದನ ಮುಗಿಲು ಮುಟ್ಟಿದೆ. ಇನ್ನು ಗ್ರಾಮದಲ್ಲಿರುವ ಆಸ್ಪತ್ರೆಯಲ್ಲಿ ವೈದ್ಯರು ಇದ್ದಿದ್ದರೆ ತನ್ನ ಮಗನ ಜೀವ ಉಳಿಯುತ್ತಿತ್ತು ಎಂದು ಮೃತನ ಕುಟುಂಬಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮೃತಪಟ್ಟ ಯುವಕನ ಹೆಸರು ಚಿನ್ಮಯಾನಂದ, ವಯಸ್ಸು ಕೇವಲ 33 ವರ್ಷ. ಚಿಕ್ಕಬಳ್ಳಾಪುರ ತಾಲ್ಲೂಕಿನ ಪೆರೇಸಂದ್ರ ಗ್ರಾಮದ ನಿವಾಸಿ. ಮುದ್ದೇನಹಳ್ಳಿಯ ಸತ್ಯಗ್ರಾಮದಲ್ಲಿ ಸಿವಿಲ್ ಇಂಜಿನಿಯರ್ ಆಗಿ ಹಲವು ವರ್ಷಗಳಿಂದ ಕೆಲಸ ಮಾಡುತ್ತಿದ್ದ ಚಿನ್ಮಯಾನಂದ, ಅಲ್ಲಿಯೇ ವಾಸವಾಗಿದ್ದರು. ಭಾನುವಾರವಾದ್ದರಿಂದ ತಾಯಿಯನ್ನು ನೋಡಲು ಸ್ವಗ್ರಾಮಕ್ಕೆ ಬಂದಿದ್ದರು. ಆದರೆ ಮನೆಯಲ್ಲಿದ್ದ ಯುಪಿಎಸ್ ಕೆಟ್ಟು ನಿಂತಿದ್ದರಿಂದ ಅದಕ್ಕೆ ಡಿಸ್ಟಿಲ್ಡ್ ವಾಟರ್ ತುಂಬಿಸುವ ಸಂದರ್ಭದಲ್ಲಿ ವಿದ್ಯುತ್ ಶಾಕ್ ಹೊಡೆದು ಮೃತಪಟ್ಟಿದ್ದಾರೆ ಎನ್ನ ಲಾಗಿದೆ. ಇನ್ನೂ ಚಿಕ್ಕ ವಯಸ್ಸಿನಲ್ಲೇ ತಂದೆಯನ್ನು ಕಳೆದುಕೊಂಡಿದ್ದ ಚಿನ್ಮಯಾನಂದ, ಕುಟುಂಬಕ್ಕೆ ಆಧಾರವಾಗಿದ್ದರು. ತಾಯಿ, ಪತ್ನಿ ಹಾಗೂ ಕೇವಲ 11 ತಿಂಗಳ ಹೆಣ್ಣು ಮಗುವನ್ನು ಅಗಲಿದ್ದಾರೆ. ಮನೆಯ ಜವಾಬ್ದಾರಿ ಹೊತ್ತಿದ್ದ ಮಗನನ್ನು ಕಳೆದುಕೊಂಡ ಕುಟುಂಬದ ದುಃಖ ಹೇಳತೀರದಾಗಿದೆ. ಇನ್ನೊಂದೆಡೆ, ಚಿನ್ಮಯಾನಂದ ಅವರ ಅಂಗಾಂಗ ದಾನದ ನಿರ್ಧಾರ ಮತ್ತೊಂದು ಜೀವಕ್ಕೆ ಹೊಸ ಬದುಕಿನ ಭರವಸೆ ನೀಡಿದೆ. ಸಾವಿನಲ್ಲೂ ಸಾರ್ಥಕತೆ ಮೆರೆದ ಯುವಕನ ಮಾನವೀಯ ಕಾರ್ಯಕ್ಕೆ ಎಲ್ಲೆಡೆಯಿಂದ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಇನ್ನು ಘಟನೆ ಬೆನ್ನಲ್ಲೇ ಮೃತನ ಸಂಬಂಧಿಕರು ಗ್ರಾಮದ ಆಸ್ಪತ್ರೆಯ ಅವ್ಯವಸ್ಥೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪೆರೇಸಂದ್ರ ಗ್ರಾಮದಲ್ಲಿ ಆಸ್ಪತ್ರೆ ಇದ್ದರೂ ಇಲ್ಲದಂತಾಗಿದೆ. ಆಸ್ಪತ್ರೆಯಲ್ಲಿ ವೈದ್ಯರು ಲಭ್ಯವಿದ್ದಿದ್ದರೆ ನಮ್ಮ ಮಗನ ಜೀವ ಉಳಿಯುತ್ತಿತ್ತು ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.

ಶಾಸಕರು ಹಾಗೂ ಸಂಸದರು ಈ ಸಮಸ್ಯೆಯತ್ತ ಗಮನಹರಿಸಬೇಕು. ಸಂಬಂಧಪಟ್ಟ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ತಕ್ಷಣ ಕ್ರಮ ಕೈಗೊಂಡು, ಮುಂದಿನ ದಿನಗಳಲ್ಲಿ ಇಂತಹ ಘಟನೆಗಳಿಂದ ಮತ್ತೊಂದು ಜೀವ ಬಲಿಯಾಗದಂತೆ ನೋಡಿಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಒಂದೆಡೆ ಕುಟುಂಬದ ಆಧಾರಸ್ತಂಭವಾಗಿದ್ದ ಯುವಕನ ಅಕಾಲಿಕ ಸಾವು, ಮತ್ತೊಂದೆಡೆ ಅಂಗಾಂಗ ದಾನದ ಮೂಲಕ ಜೀವದಾನ ಮಾಡಿದ ಮಾನವೀಯತೆ. ಚಿನ್ಮಯಾನಂದ ಅವರ ಸಾವು ಕುಟುಂಬಕ್ಕೆ ತುಂಬಲಾರದ ನಷ್ಟ ತಂದಿದೆ. ಅದೇ ಸಮಯದಲ್ಲಿ, ಗ್ರಾಮೀಣ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ತುರ್ತು ಚಿಕಿತ್ಸಾ ಸೌಲಭ್ಯಗಳ ಅಗತ್ಯವನ್ನೂ ಈ ಘಟನೆ ಮತ್ತೆ ನೆನಪಿಸಿದೆ. ಇನ್ನಾದರೂ ಸಂಬಂಧಪಟ್ಟ ಅಧಿಕಾರಿಗಳು ಎಚ್ಚೆತ್ತುಕೊಂಡು ಗ್ರಾಮೀಣ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುತ್ತಾರಾ ಎಂಬುದನ್ನು ಕಾದುನೋಡಬೇಕಿದೆ.

# ತಂದೆ-ಮಗುವಿನ ಜೀವ ತೆಗೆದ ಅಪರಿಚಿತ ವಾಹನ ಸ್ಕೂಟಿಗೆ ಡಿಕ್ಕಿ ಹೊಡೆದು ನಿಲ್ಲಿಸದೆ ಪರಾರಿ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರದಲ್ಲಿ ಭೀಕರ ಹಿಟ್ ಅಂಡ್ ರನ್ ಅಪಘಾತ ಸಂಭವಿಸಿದೆ. ಸ್ಕೂಟಿಗೆ ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿಣಾಮ ತಂದೆ ಹಾಗೂ ಒಂದೂವರೆ ವರ್ಷದ ಪುಟ್ಟ ಮಗಳು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಸ್ಕೂಟಿಯಲ್ಲಿದ್ದ ತಾಯಿ ಪವಾಡ ಸದೃಶ ರೀತಿಯಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಈಶಾ ಆದಿಯೋಗಿಯ ದರ್ಶನ ಪಡೆದು ವಾಪಸ್ ಆಗುತ್ತಿದ್ದ ವೇಳೆ ಚಿಕ್ಕಬಳ್ಳಾಪುರ ಬೈಪಾಸ್ ಹೈವೇಯ ಅಮಾನಿಗೋಪಾಲಕೃಷ್ಣ ಕೆರೆ ಬಳಿ ಈ ದುರಂತ ಸಂಭವಿಸಿದೆ. ಅಪಘಾತ ಎಸಗಿ ಪರಾರಿಯಾಗಿರುವ ವಾಹನಕ್ಕಾಗಿ ಪೊಲೀಸರು ಶೋಧ ನಡೆಸುತ್ತಿದ್ದಾರೆ.

ಚಿಕ್ಕಬಳ್ಳಾಪುರದಲ್ಲಿ ಭೀಕರ ಹಿಟ್ ಅಂಡ್ ರನ್ ಅಪಘಾತ ಸಂಭವಿಸಿದೆ. ಸ್ಕೂಟಿಗೆ ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿಣಾಮ ತಂದೆ ಹಾಗೂ ಒಂದೂವರೆ ವರ್ಷದ ಪುಟ್ಟ ಮಗಳು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ದರ್ಶನ ಪಡೆದು ಸಂತೋಷದಿಂದ ಮನೆಗೆ ಮರಳುತ್ತಿದ್ದ ಕುಟುಂಬಕ್ಕೆ ವಿಧಿ ವಕ್ಕರಿಸಿದೆ. ರಸ್ತೆ ಅಪಘಾತದಲ್ಲಿ ತಂದೆ ಹಾಗೂ ಪುಟ್ಟ ಮಗಳು ಬಲಿಯಾಗಿದ್ದು, ತಾಯಿ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ನೇಪಾಳ ಮೂಲದ ಗೋಬಿಂದಾ ಭೋಗಾಟಿ ಹಾಗೂ ಧನಲಕ್ಷ್ಮೀ ದಂಪತಿ ಬೆಂಗಳೂರಿನ ಜಯನಗರದಲ್ಲಿ ವಾಸವಾಗಿದ್ದರು. ತಮ್ಮ ಒಂದೂವರೆ ವರ್ಷದ ಮಗಳು ಫಲೀಸಾ ಭೋಗಾಟಿ ಜೊತೆ ಸ್ಕೂಟಿಯಲ್ಲಿ ಈಶಾ ಆದಿಯೋಗಿಯ ದರ್ಶನಕ್ಕೆ ತೆರಳಿದ್ದರು. ದರ್ಶನ ಮುಗಿಸಿ

ವಾಪಸ್ ಆಗುತ್ತಿದ್ದಾಗ ಚಿಕ್ಕಬಳ್ಳಾಪುರ ನಗರದ ಹೊರವಲಯದ ಅಮಾನಿಗೋಪಾಲಕೃಷ್ಣ ಕೆರೆ ಬಳಿ ಅಪರಿಚಿತ ವಾಹನ ಸ್ಕೂಟಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಸ್ಕೂಟಿ ಸವಾರ ಗೋಬಿಂದಾ ಭೋಗಾಟಿ ಹಾಗೂ ಪುಟ್ಟ ಮಗಳು ಫಲೀಸಾ ಭೋಗಾಟಿ ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ. ಸ್ಕೂಟಿಯ ಹಿಂಬದಿಯಲ್ಲಿ ಕುಳಿತಿದ್ದ ತಾಯಿ ಧನಲಕ್ಷ್ಮೀ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಗಾಯಗೊಂಡ ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಒಂದೇ ಕುಟುಂಬದ ಇಬ್ಬರು ಜೀವಗಳನ್ನು ಬಲಿ ಪಡೆದ ಈ ಅಪಘಾತದಿಂದ ಕುಟುಂಬಸ್ಥರಲ್ಲಿ ಶೋಕ ಮಡುಗಟ್ಟಿದೆ. ಇನ್ನೊಂದೆಡೆ, ಅಪಘಾತದ ಬಳಿಕ ವಾಹನ ನಿಲ್ಲಿಸದೆ ಪರಾರಿಯಾಗಿರುವ ಚಾಲಕನ ವಿರುದ್ಧ ಆಕ್ರೋಶ ವ್ಯಕ್ತವಾಗಿದೆ. ಇನ್ನೂ ಘಟನೆ ಸಂಬಂಧ ಚಿಕ್ಕಬಳ್ಳಾಪುರ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅಪಘಾತ ಎಸಗಿ ಪರಾರಿಯಾಗಿರುವ ಅಪರಿಚಿತ ವಾಹನವನ್ನು ಪತ್ತೆಹಚ್ಚಲು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

# ಹಂಡಿಗನಾಳ ಡೇರಿ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಗರಿಗೆ ಗೆಲುವು ಮಾಜಿ ಸಚಿವ ವಿ.ಮುನಿಯಪ್ಪ ಹುಟ್ಟೂರು ಡೇರಿಯಲ್ಲಿ ಗೆದ್ದು ಬೀಗಿದ ಕಾಂಗ್ರೆಸ್



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಶಿಡ್ಲಘಟ್ಟ:** ತೀವ್ರ ಕುತೂಹಲ ಕೆರಳಿಸಿದ ಹಂಡಿಗನಾಳ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ನಿರ್ದೇಶಕರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ 12 ಮಂದಿ ನಿರ್ದೇಶಕರ ಪೈಕಿ 11 ಸ್ಥಾನಗಳಲ್ಲಿ ಕಾಂಗ್ರೆಸ್ ಬೆಂಬಲಿತ ನಿರ್ದೇಶಕರು ಆಯ್ಕೆಯಾಗಿದ್ದು, ಕೇವಲ ಒಂದು ಸ್ಥಾನದಲ್ಲಿ ಜೆಡಿಎಸ್ ಬೆಂಬಲಿತ ನಿರ್ದೇಶಕರು ಆಯ್ಕೆಯಾಗಿದ್ದಾರೆ.

ಮಾಜಿ ಸಚಿವ ವಿ.ಮುನಿಯಪ್ಪ ಅವರ ಹುಟ್ಟೂರು ಹಂಡಿಗನಾಳದ ಮಹಿಳಾ ಡೇರಿಯ ಈ ಚುನಾವಣೆ ಸಹಜವಾಗಿ ಜೆಡಿಎಸ್ ಮತ್ತು ಕಾಂಗ್ರೆಸಿಗರ ನಡುವೆ ತೀವ್ರ ಪೈಪೋಟಿ, ಕುತೂಹಲ ಮತ್ತು ಪ್ರತಿಷ್ಠೆಗೂ ಕಾರಣವಾಗಿತ್ತು. ಬೆಳಗ್ಗಿನಿಂದಲೇ ಚುನಾವಣೆ ಪ್ರಕ್ರಿಯೆಯಲ್ಲಿ ಮತದಾರರು ಉತ್ಸಾಹದಿಂದ ಭಾಗವಹಿಸಿದ್ದರು.

ಅವರ ಪರವಾಗಿ ಕುಟುಂಬದವರು ಕೂಡ ಬೆಂಬಲಕ್ಕೆ ನಿಂತಿದ್ದರು. ಮತದಾನ ನಡೆದ ಸಹಕಾರ ಸಂಘದ ಕಚೇರಿ ಬಳಿ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆಯನ್ನು ಮಾಡಲಾಗಿತ್ತು.

ಪ.ಜಾತಿಯ ಅನಸೂಯಮ್ಮ, ಪ.ಪಂಗಡದ ಮುನಿರತ್ನಮ್ಮ, ಹಿಂದುಳಿದ ವರ್ಗ ಎ ಮೀಸಲು ಕ್ಷೇತ್ರದಿಂದ ಮುನಿರತ್ನಮ್ಮ, ಹಿಂ.ವರ್ಗದ ಬಿ ಮೀಸಲು ಕ್ಷೇತ್ರದಿಂದ ಪಾರ್ವತಮ್ಮ, ಸಾಮಾನ್ಯ ಕ್ಷೇತ್ರದಿಂದ ಎಸ್.ನಳಿನ, ರತ್ನಮ್ಮ, ಕಾಂತಮ್ಮ, ಯಶೋಧಮ್ಮ, ಎನ್.ಜಿ.ಶಾಂತಮ್ಮ, ಅನಸೂಯಮ್ಮ, ಮುನಿರತ್ನಮ್ಮ ಹಾಗೂ ಶಾರದಮ್ಮ ಅವರು ಚುನಾಯಿತರಾದರು.

ಕಾಂಗ್ರೆಸ್ ಬೆಂಬಲಿಗರು 11 ಸ್ಥಾನಗಳಲ್ಲಿ ಗೆಲ್ಲುತ್ತಿದ್ದಂತೆ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು. ವಿಜೇತ ನಿರ್ದೇಶಕರನ್ನು ಹೂಹಾರ ಹಾಕಿ ಅಭಿನಂದಿಸಿದರು.

ಈ ವೇಳೆ ಮಾತನಾಡಿದ ಕಾಂಗ್ರೆಸ್ ಮುಖಂಡ ಬಿ.ಎಂ.ಜಯರಾಮ್, ಮಾಜಿ ಸಚಿವ ವಿ.ಮುನಿಯಪ್ಪ ಅವರ ಸ್ವಗ್ರಾಮ ಹಂಡಿಗನಾಳದಲ್ಲಿ ಈ ಚುನಾವಣೆ ನಮಗೆ ಪ್ರತಿಷ್ಠೆಯಾಗಿದ್ದು,

ವಿ.ಮುನಿಯಪ್ಪ ಅವರ ಆಶೀರ್ವಾದ, ಕಾಂಗ್ರೆಸ್ ಮುಖಂಡ ರಾಜೀವ್‌ಗೌಡ ಅವರ ಸಹಕಾರದಿಂದ ಡೇರಿ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಗರು ಗೆದ್ದಿದ್ದು ನಮ್ಮ ಪಾಲಾಗಿದೆ.

ಡೇರಿಯನ್ನು ಉತ್ತಮವಾಗಿ ನಡೆಸಿಕೊಂಡು ಹೋಗುತ್ತೇವೆ ಎಂದರು.

ಸಹಕಾರ ಇಲಾಖೆ ಅಭಿವೃದ್ಧಿ ಅಧಿಕಾರಿ ಮಂಜುನಾಥ್ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದರು.

ಡೇರಿ ಕಾರ್ಯದರ್ಶಿ ರೂಪ, ಕಾಂಗ್ರೆಸ್ ಮುಖಂಡರಾದ ಜಯರಾಮ್, ಅರುಣ್ ಕುಮಾರ್, ಗೋವಿಂದರಾಜು, ನಾರಾಯಣಸ್ವಾಮಿ,

ಗಜೇಂದ್ರ, ಮಂಜುನಾಥ್, ರಕ್ಷಿತ್, ಗೋಪಾಲಕೃಷ್ಣ, ಮುರಳಿ, ವಿಜೇತ ನಿರ್ದೇಶಕರು, ಗ್ರಾಮಸ್ಥರು ವಿಜಯೋತ್ಸವದಲ್ಲಿ ಮತ್ತಿತರರು ಭಾಗವಹಿಸಿದ್ದರು.

# ಚೀಲಂನಹಳ್ಳಿಯಲ್ಲಿ ಜಿಕೆವಿಕೆ ಕೃಷಿ ವಿದ್ಯಾರ್ಥಿಗಳಿಂದ ಗ್ರಾಮೀಣ ಕೃಷಿ ಕ್ಷೇತ್ರೋತ್ಸವ

# ರೈತರಿಗೆ ವೈಜ್ಞಾನಿಕ ಕೃಷಿ ಪದ್ಧತಿಗಳ ಕುರಿತು ಮಾಹಿತಿ : ಮೂರು ತಿಂಗಳ ಗ್ರಾಮೀಣ ವಾಸ್ತವ್ಯ



ಗೌರಿಬಿದನೂರು: ಚೀಲಂನಹಳ್ಳಿ ಗ್ರಾಮದಲ್ಲಿ ಜಿಕೆವಿಕೆ ಕೃಷಿ ವಿದ್ಯಾರ್ಥಿಗಳಿಂದ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಗ್ರಾಮೀಣ ಕೃಷಿ ಕ್ಷೇತ್ರೋತ್ಸವ ಕಾರ್ಯಕ್ರಮ ಆಯೋಜನೆ

ಚೀಲಂನಹಳ್ಳಿ ಅಕ್ಟೋಬರ್ 9, 2026: ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಜಿಕೆವಿಕೆ ಕೃಷಿ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಗ್ರಾಮೀಣ ಕೃಷಿ ಕಾರ್ಯಾನುಭವ ಕಾರ್ಯಕ್ರಮದ ಅಂಗವಾಗಿ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿನ ಡಿ. ಪಾಳ್ಯ ಹೋಬಳಿಯ ಚೀಲಂನಹಳ್ಳಿ ಗ್ರಾಮದಲ್ಲಿ ಮೂರು ತಿಂಗಳ ಕಾಲ ವಾಸ್ತವ್ಯ ಹೂಡಿ ಕೃಷಿ ಕ್ಷೇತ್ರ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ.

ಈ ಕಾರ್ಯಕ್ರಮದ ಮುಖ್ಯ ಉದ್ದೇಶ ರೈತರೊಂದಿಗೆ ನೇರ ಸಂಪರ್ಕ ಬೆಳೆಸಿಕೊಂಡು, ಅವರಿಗೆ ಆಧುನಿಕ ಕೃಷಿ ತಂತ್ರಜ್ಞಾನಗಳ ಕುರಿತು ಮಾಹಿತಿ ನೀಡುವುದು ಹಾಗೂ ಕೃಷಿಯಲ್ಲಿ ಅವರು ಎದುರಿಸುತ್ತಿರುವ ಸಮಸ್ಯೆಗಳನ್ನು ಅರಿತುಕೊಳ್ಳುವುದಾಗಿದೆ. ವಿದ್ಯಾರ್ಥಿಗಳು ರೈತರಿಗೆ ವೈಜ್ಞಾನಿಕ ಕೃಷಿ ಪದ್ಧತಿಗಳು, ಬೆಳೆ ನಿರ್ವಹಣೆ, ಮಣ್ಣಿನ ಆರೋಗ್ಯ, ಸಮತೋಲಿತ ಗೊಬ್ಬರ ಬಳಕೆ ಹಾಗೂ ಕೀಟ ಮತ್ತು ರೋಗಗಳ ನಿರ್ವಹಣೆಯ ಕುರಿತು ಮಾಹಿತಿ ಮತ್ತು ಮಾರ್ಗದರ್ಶನ ನೀಡುತ್ತಿದ್ದಾರೆ.

ಇದರ ಜೊತೆಗೆ, ವಿದ್ಯಾರ್ಥಿಗಳು ಗ್ರಾಮದ ರೈತರನ್ನು ಭೇಟಿ ಮಾಡಿ ಅವರ ಕೃಷಿ ಪದ್ಧತಿಗಳು, ಬೆಳೆ ಉತ್ಪಾದನೆಯಲ್ಲಿನ ಸವಾಲುಗಳು, ನೀರಾವರಿ ಸಮಸ್ಯೆಗಳು ಹಾಗೂ ಕೃಷಿ ವೆಚ್ಚದ ಕುರಿತು ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಅಲ್ಲದೆ, ವಿವಿಧ ಬೆಳೆಗಳನ್ನು ಬೆಳೆಸುವ ಮೂಲಕ ಬಿತ್ತನೆಯಿಂದ ಹಿಡಿದು ಬೆಳೆ ನಿರ್ವಹಣೆಯವರೆಗಿನ ವಿವಿಧ ಕೃಷಿ ಚಟುವಟಿಕೆಗಳಲ್ಲಿ ಪ್ರಾಯೋಗಿಕ ಅನುಭವ ಪಡೆಯುತ್ತಿದ್ದಾರೆ.

ಈ ಕಾರ್ಯಕ್ರಮದಲ್ಲಿ ತಾ.ಪಂ ಅಧಿಕಾರಿ ಬಾಲಕೃಷ್ಣ, ಕೃಷಿ ಅಧಿಕಾರಿ ವೀರಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವಿಜಯಕುಮಾರ್, ರೈತ ಸಂಘದ ಅಧ್ಯಕ್ಷ ಲೋಕೇಶ್, ಸ್ವಸಹಾಯ ಸಂಘದ ಅಧ್ಯಕ್ಷೆ ರಾಧಮ್ಮ ಹಾಗೂ ಡಿ. ಪಾಳ್ಯದ ಕರ್ನಾಟಕ ಪಬ್ಲಿಕ್ ಶಾಲೆಯ ಮುಖ್ಯೋಪಾಧ್ಯಾಯ ಚಂದ್ರಣ್ಣ ಸೇರಿದಂತೆ ಸ್ಥಳೀಯ ಗಣ್ಯರು ಭಾಗವಹಿಸಿ ಕಾರ್ಯಕ್ರಮಕ್ಕೆ ಬೆಂಬಲ ನೀಡುತ್ತಿದ್ದಾರೆ.

ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕೃಷಿ ಮಹಾವಿದ್ಯಾಲಯದ ಡೀನ್ ಡಾ. ವೈ. ಎನ್. ಶಿವಲಿಂಗಯ್ಯ ಅವರ ಮಾರ್ಗದರ್ಶನದಲ್ಲಿ, ಸಹ ಪ್ರಾಧ್ಯಾಪಕರಾದ ಡಾ. ಎಚ್. ಕೆ. ಪಂಕಜ (ಕೃಷಿ ವಿಸ್ತರಣಾ ವಿಭಾಗ), ಡಾ. ಬಿ. ವಿ. ಶ್ವೇತಾ (ಜೇನು ಕೃಷಿ ವಿಭಾಗ), ಡಾ. ಸೀನಪ್ಪ (ಕೃಷಿ ಶಾಸ್ತ್ರ ವಿಭಾಗ), ಡಾ. ಅರವಿಂದ್ ಯಾದವ್ (ಕೃಷಿ ಎಂಜಿನಿಯರಿಂಗ್ ವಿಭಾಗ) ಹಾಗೂ ಗ್ರಾಮೀಣ ಕೃಷಿ ಕಾರ್ಯಾನುಭವ ಕಾರ್ಯಕ್ರಮದ ಪ್ರಾಧ್ಯಾಪಕರು ಮತ್ತು ಸಹ ಸಂಯೋಜಕರಾದ ಡಾ. ಎಸ್. ಗಣೇಶ್ ಮೂರ್ತಿ ಅವರ ಸಹಕಾರದೊಂದಿಗೆ ಈ ಕಾರ್ಯಕ್ರಮ ನಡೆಯುತ್ತಿದೆ.

ಮೂರು ತಿಂಗಳ ಈ ಗ್ರಾಮೀಣ ವಾಸ್ತವ್ಯವು ವಿದ್ಯಾರ್ಥಿಗಳಿಗೆ ರೈತರ ಜೀವನ, ಕೃಷಿಯಲ್ಲಿನ ನೈಜ ಸಮಸ್ಯೆಗಳು ಹಾಗೂ ಗ್ರಾಮೀಣ ಪರಿಸ್ಥಿತಿಯನ್ನು ಹತ್ತಿರದಿಂದ ಅರಿತುಕೊಳ್ಳಲು ಸಹಕಾರಿಯಾಗಿದೆ. ಈ ಕಾರ್ಯಕ್ರಮದ ಮೂಲಕ ರೈತರು ಮತ್ತು ಕೃಷಿ ವಿದ್ಯಾರ್ಥಿಗಳ ನಡುವೆ ಉತ್ತಮ ಬಾಂಧವ್ಯ ಬೆಳೆಸುವುದರ ಜೊತೆಗೆ, ವೈಜ್ಞಾನಿಕ ಕೃಷಿ ತಂತ್ರಜ್ಞಾನಗಳನ್ನು ರೈತರಿಗೆ ತಲುಪಿಸಿ ಕೃಷಿ ಕ್ಷೇತ್ರದ ಅಭಿವೃದ್ಧಿಗೆ ಕೊಡುಗೆ ನೀಡುವ ಉದ್ದೇಶ ಹೊಂದಲಾಗಿದೆ

# ಎಸ್‌ಐಆರ್ ವಿವಾದ-ಚುನಾವಣಾ ಆಯೋಗದ ವಿರುದ್ಧ ಕಾಂಗ್ರೆಸ್ ಕಿಡಿ ಶಿಡ್ಲಘಟ್ಟದಲ್ಲಿ ಅದ್ದೂರಿ ಗಣೇಶ ವಿಸರ್ಜನೆ ಆನೆ ಮೇಲಿನ ಮೆರವಣಿಗೆಗೆ ಜನಸಾಗರ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಶಿಡ್ಲಘಟ್ಟ:** ಚುನಾವಣಾ ಆಯೋಗದ ಅಧ್ಯಕ್ಷರ ಕಾರ್ಯವೈಖರಿಯನ್ನು ಖಂಡಿಸಿ ದೇಶಾದ್ಯಂತ ಆಂದೋಲನ ನಡೆಯುತ್ತಿದ್ದು ಪ್ರತಿಭಟನೆ ಮಾಡಿದ ನಮ್ಮ ಪಕ್ಷದ ಹೈ ಕಮಾಂಡ್ ರಾಹುಲ್ ಗಾಂಧಿಯನ್ನು ಬಂಧಿಸಿ ಬಿಡುಗಡೆ ಮಾಡಿದ್ದಾರೆ. ಪ್ರಿಯಾಂಕ ಗಾಂಧಿಯವರನ್ನು ಕೂಡ ಬಂಧಿಸಿ ಬಿಡುಗಡೆ ಮಾಡಿದ್ದಾರೆ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದರು.

ತಾಲೂಕಿನ ಜಂಗಮಕೋಟೆಯಲ್ಲಿ ಶ್ರೀಪ್ರಸನ್ನ ಗಂಗಾಧರೇಶ್ವರಸ್ವಾಮಿ ಗೆಳೆಯ ಬಳಗದಿಂದ ಹಮ್ಮಿಕೊಂಡಿದ್ದ ಸಾಮೂಹಿಕ ಗಣಪತಿ ಮೂರ್ತಿಗಳ ವಿಸರ್ಜನೆ ಉತ್ಸವದಲ್ಲಿ ಭಾಗವಹಿಸಿ ಮಾತನಾಡಿದರು.

ದೇಶದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಎಸ್‌ಐಆರ್ ಕಾರ್ಯದಲ್ಲಿ ಅನೇಕ ನ್ಯೂನ್ಯತೆಗಳು ಕಂಡು ಬಂದಿದ್ದು ಉದ್ದೇಶಪೂರ್ವಕವಾಗಿ ಒಂದು ಸಮುದಾಯವನ್ನು ಮತದಾರರ ಪಟ್ಟಿಯಿಂದ ಕೈ ಬಿಡುವ ಮತ್ತು ಒಂದು ಪಕ್ಷದವರ ಪರ ಆಯೋಗ ಕೆಲಸ ಮಾಡುತ್ತಿದೆ ಎಂಬ ಕೂಗು ಕೇಳಿ ಬರುತ್ತಿದೆ. ಈ ಬಗ್ಗೆ ತನಿಖೆ ಆಗಬೇಕು, ಸರಿಯಾದ ರೀತಿಯಲ್ಲಿ ಎಸ್‌ಐಆರ್ ಕಾರ್ಯ ನಡೆಯಬೇಕು ಮತ್ತು ಅರ್ಹ ಯಾವೊಬ್ಬ ಮತದಾರರೂ ಮತದಾರ ಪಟ್ಟಿಯಿಂದ ಕೈ ಬಿಡಬಾರದು ಎಂಬುದು ನಮ್ಮ ಕೂಗು ಎಂದರು.

ಈ ನಿಟ್ಟಿನಲ್ಲಿ ಕರ್ನಾಟಕ, ಕೇರಳ ಸೇರಿದಂತೆ ದೇಶದ ಉದ್ದಗಲಕ್ಕೂ ಪ್ರತಿಭಟನೆಯು ಆಂದೋಲನ ರೀತಿಯಲ್ಲಿ ನಡೆಯುತ್ತಿದೆ. ನಮ್ಮ ಪಕ್ಷದ ಹೈಕಮಾಂಡ್ ರಾಹುಲ್ ಗಾಂಧಿ, ಪ್ರಿಯಾಂಕಗಾಂಧಿ ಸೇರಿದಂತೆ ಪ್ರತಿಭಟನೆಯಲ್ಲಿ ಭಾಗವಹಿಸಿದ ಅನೇಕ ನಾಯಕರನ್ನು ಬಂಧಿಸಿ ಬಿಡುಗಡೆ ಮಾಡಲಾಗಿದೆ.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಭಟನೆ ಎಲ್ಲರ ಹಕ್ಕು, ಚುನಾವಣಾ ಆಯೋಗದ ಕಾರ್ಯವೈಖರಿ ಸರಿಯಿಲ್ಲದಾಗ ಪ್ರಶ್ನಿಸುವ ಹಕ್ಕು ಎಲ್ಲರಿಗೂ ಇದೆ. ಅದನ್ನು ಮಾಡಿದ ನಮ್ಮ ಪಕ್ಷದ ನಾಯಕರು ಸೇರಿ ಪ್ರತಿಭಟನಾಕಾರರನ್ನು ಬಂಧಿಸುವುದು ಸರಿಯಾದ ಕ್ರಮವಲ್ಲ, ಚುನಾವಣಾ ಆಯೋಗದ ಏಕಪಕ್ಷೀಯ ಕಾರ್ಯವೈಖರಿ ವಿರುದ್ಧ ಪ್ರತಿಭಟನೆ ಮುಂದುವರೆಯುತ್ತದೆ ಎಂದರು.

ಕ್ಷೇತ್ರದಲ್ಲಿ ರಾಜೀವ್‌ಗೌಡ ಅವರು ಜನತೆ ಮದ್ಯೆ ಕೆಲಸ ಮಾಡುತ್ತಿದ್ದಾರೆ. ವಿವಿಧ ಸಮಿತಿಗಳಿಗೆ ನಾಮ ನಿರ್ದೇಶನ ಸೇರಿದಂತೆ ಸರಕಾರದಿಂದ ಸಿಗುವ ಅನೇಕ ಸವಲತ್ತುಗಳನ್ನು ಕ್ಷೇತ್ರದ ಜನತೆಗೆ ತಲುಪಿಸುತ್ತಿದ್ದು ಪಕ್ಷದ ಸಂಘಟನೆಯನ್ನು ಮಾಡುತ್ತಿದ್ದು ಮುಂಬರುವ ಸ್ಥಳೀಯ ಚುನಾವಣೆಗಳಲ್ಲಿ ಅವರ ನಾಯಕತ್ವದಲ್ಲಿ

ಚುನಾವಣೆಗಳನ್ನು ಎದುರಿಸಿ ಎಂದು ಹೇಳಿದರು. ಕ್ಷೇತ್ರದ ಕಾಂಗ್ರೆಸ್‌ನಲ್ಲಿ ಸಣ್ಣ ಪುಟ್ಟ ಸಮಸ್ಯೆಗಳು ಇವೆ. ಅದು ಪಕ್ಷಕ್ಕೆ ದೊಡ್ಡದೇನಲ್ಲ. ಮುಂದಿನ ದಿನಗಳಲ್ಲಿ ಎಲ್ಲ ಸಮಸ್ಯೆಗಳನ್ನು ನಿವಾರಿಸಿ ರಾಜೀವ್‌ಗೌಡರಿಗೆ ಅನುಕೂಲ ಮಾಡಿಕೊಡೋಣ ಎಂದರು.

ಕಾಂಗ್ರೆಸ್ ಮುಖಂಡ ರಾಜೀವ್‌ಗೌಡ ಮಾತನಾಡಿ, ಶ್ರೀಪ್ರಸನ್ನ ಗಂಗಾಧರೇಶ್ವರಸ್ವಾಮಿ ಯುವಕರ ಬಳಗವು ಅನೇಕ ವರ್ಷಗಳಿಂದ ಎಲ್ಲರನ್ನೂ ಒಗ್ಗೂಡಿಸಿಕೊಂಡು ಗಣೇಶನನ್ನು ಪ್ರತಿಷ್ಠಾಪಿಸಿ ಸಾಮೂಹಿಕ ವಿಸರ್ಜನೆ ಉತ್ಸವ ನಡೆಸುವ ಮೂಲಕ ಎಲ್ಲ ಜಾತಿ, ಧರ್ಮಗಳನ್ನು ಒಟ್ಟುಗೂಡಿಸಿ ಸಾಮರಸ್ಯವನ್ನು ಕಾಪಾಡಿಕೊಂಡು ಬರುತ್ತಿರುವುದು ಶ್ಲಾಘನೀಯ ಎಂದರು.

ಕಳೆದ ವಿಧಾನಸಭೆ ಚುನಾವಣೆಯಲ್ಲಿ ನಾನು ಸೋತಿರಬಹುದು, ಸೋಲು ಗೆಲುವು ಎರಡನ್ನೂ ಸಮಾನವಾಗಿ ಸ್ವೀಕರಿಸುತ್ತೇನೆ. ನಿಮ್ಮ ನಡುವೆ ಇದ್ದು ಕೆಲಸ ಮಾಡುತ್ತೇನೆ. ಮುಂದಿನ ದಿನಗಳಲ್ಲಿ ನಿಮ್ಮ ಆಶೀರ್ವಾದ ನಮ್ಮ ಪಕ್ಷ ಹಾಗೂ ನನ್ನ ಮೇಲೆ ಇರಲಿ ಎಂದು ಕೋರಿದರು.

ಆನೆ ಮೆರವಣಿಗೆ ಶ್ರೀಪ್ರಸನ್ನ ಗಂಗಾಧರೇಶ್ವರಸ್ವಾಮಿ ದೇವಾಲಯ ವೃತ್ತದಿಂದ ಜಂಗಮಕೋಟೆ ಕ್ರಾಸ್‌ವರೆಗೂ ಆನೆ ಮೇಲೆ ಶ್ರೀಪ್ರಸನ್ನಗಂಗಾಧರೇಶ್ವರಸಾ ್ವಮಿ ಮೂರ್ತಿಯನ್ನು ಇಟ್ಟು ಮೆರವಣಿಗೆ ನಡೆಯಿತು. ಗ್ರಾಮದಲ್ಲಿ ಪ್ರತಿಷ್ಠಾಪಿಸಿದ್ದ ಎಲ್ಲ ಗಣಪತಿ ಮೂರ್ತಿಗಳ ಮೆರವಣಿಗೆ ನಡೆಯಿತು.

ಡೊಳ್ಳು ಕುಣಿತ, ಗಾರುಡಿಗೊಂಬೆ, ತಮಟೆ ಇನ್ನಿತರೆ ಜನಪದ ಕಲಾತಂಡಗಳು ಮೆರವಣಿಗೆಗೆ ಮೆರಗು ನೀಡಿತು. ಆನೆ ಮೆರವಣಿಗೆ ಎಲ್ಲರ ಗಮನ ಸೆಳೆಯಿತು. ಅನೇಕರು ಆನೆ ಮುಂದೆ ನಿಂತು ಸೆಲ್ಫಿ ತೆಗೆಸಿಕೊಂಡು ಸಂಭ್ರಮಿಸಿದರು.

ಸಚಿವ ಕೆ.ಎಚ್.ಮುನಿಯಪ್ಪ, ಮಾಜಿ ಸಚಿವ ವರ್ತೂರು ಪ್ರಕಾಶ್, ಕಾಂಗ್ರೆಸ್ ಮುಖಂಡ ರಾಜೀವ್‌ಗೌಡ ಅವರಿಗೆ ಕ್ರೇನ್ ಮೂಲಕ ಬೃಹತ್ ಸೇಬಿನ ಹಾರ ಹಾಕಿ ಸ್ವಾಗತಿಸಿ ಮೆರವಣಿಗೆ ನಡೆಸಲಾಯಿತು. ಮೆರವಣಿಗೆ ಉದ್ದಕ್ಕೂ ಕ್ರೇನ್‌ಗಳ ಮೂಲಕ ಗಣಪತಿ ಉತ್ಸವಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.

# ಕೂಲಿ ಕೆಲಸಕ್ಕೆ ಹೋಗಿದ್ದ ಮಹಿಳೆ ಅನುಮಾನಾಸ್ಪದ ಸಾವು

## ರೈತ ವೆಂಕಟರೆಡ್ಡಿ ಹೊಲದಲ್ಲಿ ಮೃತ ಮಹಿಳೆಯ ಅಂತ್ಯಸಂಸ್ಕಾರಕ್ಕೆ ಬಿಗಿಪಟ್ಟು



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಭಾಗ್ಯನಗರ:** ರೈತರೊಬ್ಬರ ಹೊಲದಲ್ಲಿ ಕೂಲಿ ಕೆಲಸಕ್ಕೆ ಹೋಗಿದ್ದ ಮಹಿಳೆ ಅನುಮಾನಾಸ್ಪದವಾಗಿ ಮೃತಪಟ್ಟಿರುವ ಘಟನೆ ಗೂಳೂರು ಹೋಬಳಿ ಚನ್ನರಾಯನಪಲ್ಲಿ ಗ್ರಾಮದ ಬಳಿ ನಡೆದಿದ್ದು ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿದ ಸಂಬಂಧಿಕರು ಪೊಲೀಸ್ ಠಾಣೆಗೆ ಮುತ್ತಿಗೆ ಹಾಕಿ ಕೊಲೆ ಪ್ರಕರಣ ದಾಖಲಿಸುವಂತೆ ಒತ್ತಾಯಸಿದ್ದಾರೆ.

ರೈತ ವೆಂಕಟರೆಡ್ಡಿ ಎಂಬುವವರ ಹೊಲದಲ್ಲಿ ಕೃಷಿ ಕೆಲಸ ಮಾಡಲು ಕೂಲಿಗಾಗಿ ಲಕ್ಷ್ಮೀನಾರಾಯಣಪ್ಪ 50 ಎಂಬ ಮಹಿಳೆ ಪಕ್ಕದಲ್ಲಿಯೇ ಅಳವಡಿಸಿದ್ದ ಮುಳ್ಳುತಂತಿಯನ್ನು ಮುಟ್ಟಿದಾಗ ವಿದ್ಯುತ್ ಸ್ಪರ್ಷಿಸಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ ಎಂಬುದು ಪ್ರಾಥಮಿಕ ವರದಿಯಾಗಿದೆ.

ಮೃತರ ಕುಟುಂಬದವರು ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿ ಠಾಣೆಗೆ ಮುತ್ತಿಗೆ ಹಾಕಿದ್ದರಿಂದ ಅನುಮಾನಾಸ್ಪದ ಸಾವು ಪ್ರಕರಣ ದಾಖಲಿಸಿಕೊಂಡ ಪೊಲೀಸರು ಮರಣೋತ್ತರ ಪರೀಕ್ಷೆಯನ್ನು ನಡೆಸಿ ಮೃತದೇಹವನ್ನು ಸಂಬಂಧಿಕರಿಗೆ ಹಸ್ತಾಂತರಿಸಿದ್ದಾರೆ.

ಆದರೆ ಕಳೆದ ರಾತ್ರಿ ಸುಮಾರು 9 ಗಂಟೆಯಲ್ಲಿ ಮೃತದೇಹವನ್ನು ನೇರವಾಗಿ ರೈತ ವೆಂಕಟರೆಡ್ಡಿ ಹೊಲದಲ್ಲಿಯೇ ಹೂಳುವುದಕ್ಕೆ ಪ್ರಯತ್ನಿಸಿ ಹೊಲದಲ್ಲಿ ಇಟ್ಟಿದ್ದಾರೆ.

ಇದು ಪೊಲೀಸರಿಗೆ ತಲೆನೋವಾಗಿ ಪರಿಣಮಿಸಿ. ಡಿವೈಎಸ್ಪಿ ಪ್ರಕಾಶ್ ನೇತೃತ್ವದಲ್ಲಿ ಬಾಗೇಪಲ್ಲಿ, ಗುಡಿಬಂಡೆ, ಗೌರಿಬಿದನೂರು, ಚಿಕ್ಕಬಳ್ಳಾಪುರ ಪೊಲೀಸ್ ಇನ್ಸ್‌ಪೆಕ್ಟರುಗಳು, ಡಿಆರ್ ಪೊಲೀಸರು ಸೇರಿದಂತೆ ಸುಮಾರು 200 ಪೊಲೀಸರು ಚನ್ನರಾಯನಪಲ್ಲಿ ಗ್ರಾಮಕ್ಕೆ ಬರುವಂತೆ ಮಾಡಿದೆ.

ಮೃತ ಮಹಿಳೆಯ ಸಂಬಂಧಿಕರು ಮತ್ತು ಗ್ರಾಮಸ್ಥರನ್ನು ಮನವೊಲಿಸಿದ ಪರಿಣಾಮ ಇಂದು ಅಂತ್ಯಕ್ರಿಯೆಯನ್ನು ನಡೆಸಲಾಗಿದ್ದು ಕೊನೆಗೂ ಪೊಲೀಸರು ನಿಟ್ಟುಸಿರು ಬಿಡುವಂತಾಗಿದೆ.

ಘಟನೆಯ ಸಂಬಂಧ ರೈತ ವೆಂಕಟರೆಡ್ಡಿ ಎಂಬುವವರನ್ನು ವಶಕ್ಕೆ ಪಡೆದಿರುವ ಪೊಲೀಸರು ತನಿಖೆಯನ್ನು ನಡೆಸುತ್ತಿದ್ದಾರೆ.

ಘಟನೆ ನಡೆದ ಸಂದರ್ಭದಲ್ಲಿ ಸ್ಥಳದಲ್ಲಿದ್ದ ಇತರೆ ಮಹಿಳೆಯರನ್ನು ತನಿಖೆ ನಡೆಸಲು ಪೊಲೀಸರು ಸಿದ್ದತೆ ನಡೆಸಿದ್ದಾರೆ.

# ಐದು ಜಿಲ್ಲೆಗಳ ಪದವೀಧರ ಕ್ಷೇತ್ರದ ಮೇಲೆ ಕಾಂಗ್ರೆಸ್ ಕಣ್ಣು

## ಶಶಿ ಹಲಿಕುಂಟೆಮಠ ಗೆಲುವಿಗೆ ಸ್ಥಳೀಯ ನಾಯಕರ ರಣತಂತ್ರ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಶಿಡ್ಲಘಟ್ಟ:** ವಿಧಾನಪರಿಷತ್ ಆಗ್ನೇಯ ಪದವೀಧರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ್ ಅವರ ಪರ ಈಗಾಗಲೆ ಕ್ಷೇತ್ರದಲ್ಲಿ ಚುನಾವಣೆ ಪ್ರಚಾರ ನಡೆಸುತ್ತಿದ್ದು ಮುಂದಿನ ನಾಲ್ಕೈದು ದಿನಗಳಲ್ಲಿ ಶಿಡ್ಲಘಟ್ಟದಲ್ಲಿ ಚುನಾವಣೆ ಪ್ರಚಾರ ಮತ್ತು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು, ಮುಖಂಡರ ಸಭೆ ನಡೆಯಲಿದೆ ಎಂದು ಕಾಂಗ್ರೆಸ್ ಕೆಪಿಸಿಸಿ ಸಂಯೋಜಕ ರಾಜೀವ್‌ಗೌಡ ತಿಳಿಸಿದರು.

ತಾಲೂಕಿನ ಜಂಗಮಕೋಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮುಂದಿನ ವಾರ ಕಾಂಗ್ರೆಸ್ ಭವನದಲ್ಲಿ ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಹಾಗೂ ಪದವೀಧರ ಮತದಾರರ ಚುನಾವಣೆ ಪ್ರಚಾರ ಸಭೆ ನಡೆಯಲಿದ್ದು ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ್ ಸೇರಿದಂತೆ ಪಕ್ಷದ ಪ್ರಮುಖ ನಾಯಕರು ಆಗಮಿಸಲಿದ್ದಾರೆ ಎಂದರು.

ಈಗಾಗಲೆ ನಾನು ಮತ್ತು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಸಹನರಾಜೀವ್‌ಗೌಡ, ಕೃಷ್ಣಾರೆಡ್ಡಿ ಸೇರಿದಂತೆ ಪಕ್ಷದ ಪ್ರಮುಖ ಮುಖಂಡರು ಪದವೀಧರ ಮತದಾರರನ್ನು ಸಂಪರ್ಕಿಸಿ ಮತ ಕೇಳುವ ಕೆಲಸ ಆಗುತ್ತಿದೆ.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಸರಕಾರ ಇದ್ದು ಪಂಚ ಗ್ಯಾರಂಟಿಗಳು, ಭೂ ಗ್ಯಾರಂಟಿ ಸೇರಿದಂತೆ ಪ್ರಮುಖ ಯೋಜನೆ, ಅಭಿವೃದ್ಧಿ ಕಾರ್ಯಗಳನ್ನು ಮುಂದಿಟ್ಟುಕೊಂಡು ಮತ ಕೇಳಲಾಗುತ್ತಿದೆ ಎಂದು ಹೇಳಿದರು.

ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್, ಸಿಎಂ ಡಿ.ಕೆ.ಶಿವಕುಮಾರ್, ಮಾಜಿ ಸಿಎಂ ಸಿದ್ದರಾಮಯ್ಯ ಅವರು ಪಕ್ಷದ ಅಭ್ಯರ್ಥಿಪರ ಪ್ರಚಾರ ನಡೆಸಲು ಹಲವು ಸೂಚನೆ, ಸಲಹೆಗಳನ್ನು ನೀಡಿದ್ದು ಅದರಂತೆ ನಾನು ಮತ್ತು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಮುಖಂಡರು, ಕಾರ್ಯಕರ್ತರು ಕಾರ್ಯಪ್ರವೃತ್ತರಾಗಿದ್ದೇವೆ ಎಂದು ವಿವರಿಸಿದರು.

ಆಗ್ನೇಯ ಪದವೀಧರರ ಕ್ಷೇತ್ರದ ವ್ಯಾಪ್ತಿ ಐದು ಜಿಲ್ಲೆಗಳನ್ನು ಒಳಗೊಂಡಿದ್ದು ಅಷ್ಟೂ ವ್ಯಾಪ್ತಿಯಲ್ಲಿ ಅಭ್ಯರ್ಥಿಯೆ ಸುತ್ತಾಡಿ ಮತ ಕೇಳುವುದು ಕಷ್ಟ ಸಾಧ್ಯವಾಗಲಿದ್ದು ಅವರ ಪರವಾಗಿ ನಾವೇ ಕ್ಷೇತ್ರದಲ್ಲಿ ಮತಯಾಚಿಸಿ ಅವರ ಗೆಲುವಿಗೆ ಶ್ರಮಿಸುತ್ತೇವೆ. ಈ ಭಾರಿ ಆಗ್ನೇಯ ಪದವೀಧರರ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಉತ್ತಮ ಒಲವು ವ್ಯಕ್ತವಾಗಿದ್ದು ಗೆಲುವು ನಿಶ್ಚಿತ ಎಂದರು.

ಈ ಸಂದರ್ಬದಲ್ಲಿ ಮಾಜಿ ತಾ.ಪಂ ಸದಸ್ಯ ನಾಗರಾಜ್, ಮುಖಂಡರಾದ ನಾಗ ನರಸಿಂಹ, ಮುತ್ತೂರು ವೆಂಕಟೇಶ್, ನಾರಾಯಣಸ್ವಾಮಿ ಮತ್ತಿತರರು ಹಾಜರಿದ್ದರು.

# ಪದವೀಧರರ ಮತಕ್ಕೆ ಮೈತ್ರಿ ನಾಯಕರ ಭರ್ಜರಿ ಕಸರತ್ತು

## ಸುರೇಶ್ ಗೆಲುವಿಗೆ ಚಿಂತಾಮಣಿಯಲ್ಲಿ ರಣತಂತ್ರ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಂತಾಮಣಿ:** ವಿದ್ಯಾವಂತರು, ಬುದ್ದಿವಂತರು, ಮೇಧಾವಿಗಳು ವಿಧಾನಪರಿಷತ್ತಿಗೆ ಎನ್ನುವ ಹಿನ್ನಲೆಯಲ್ಲಿ ಪದವೀಧರರ ಮತ್ತು ಶಿಕ್ಷಕರ ಕ್ಷೇತ್ರಗಳನ್ನು ರೂಪಿಸಲಾಗಿದೆ. ಎಂದು ಜೆಡಿಎಸ್ ಪಕ್ಷದ ಕೋರ್ ಕಮಿಟಿ ಅಧ್ಯಕ್ಷ ಎಂ.ಕೃಷ್ಣಾರೆಡ್ಡಿ ತಿಳಿಸಿದರು.



ಚಿಂತಾಮಣಿ ತಾಲ್ಲೂಕಿನ ಬೂರಗಮಾಕಲಹಳ್ಳಿಯ ಸಂಜೀವ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಆಗ್ನೇಯ ಪದವೀಧರರ ಕ್ಷೇತ್ರದ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಪ್ರಚಾರ ಸಭೆಯಲ್ಲಿ ಮಾತನಾಡಿದರು. ರಾಜ್ಯದಲ್ಲಿ ಕಾಂಗ್ರೆಸ್ನ ಸರ್ಕಾರ ಗ್ಯಾರಂಟಿಗಳ ಯೋಜನೆಗಳ ನೆಪದಲ್ಲಿ ಖಜಾನೆ ಖಾಲಿಯಾಗಿದೆ. ಹಣದ ಕ್ರೋಡೀಕರಣಕ್ಕಾಗಿ ನಾನಾ ರೀತಿಯಲ್ಲಿ ಜನರ ಸುಲಿಗೆ ಮಾಡುತ್ತಿದೆ. ಮಹಿಳೆಯರಿಗೆ ಗೃಹಲಕ್ಷ್ಮೀ ಯೋಜನೆಯ 18 ತಿಂಗಳ ಹಣ ಬಾಕಿ ನೀಡಬೇಕಾಗಿದೆ. ಶಕ್ತಿ ಯೋಜನೆಯು ಸೇರಿದಂತೆ ಯಾವ ಗ್ಯಾರಂಟಿಗಳನ್ನು ಸಮರ್ಪಕವಾಗಿ ನೀಡುತ್ತಿಲ್ಲ. ಕೆಲವು ಯೋಜನೆಗಳನ್ನು ಲೂಟಿ ಮಾಡಲು ಹಾಗೂ ಕೆಲವು ಯೋಜನೆಗಳನ್ನು ಕಾಂಗ್ರೆಸ್ ಪಕ್ಷದ ಸಂಘಟನೆಗಾಗಿ ರೂಪಿಸಿದೆ ಎಂದು ಟೀಕಿಸಿದರು.

ಶಿಕ್ಷಕರು, ಉಪನ್ಯಾಸಕರು ಮತ್ತು ಪದವೀಧರರ ಸಮಸ್ಯೆಗಳು ನಿವಾರಣೆಯಾಗಬೇಕಾದರೆ ಎನ್.ಡಿ.ಎ ಸರ್ಕಾರ ಬರಬೇಕು. ಮುಂಬರುವ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಗೆ ದಿಕ್ಸೂಚಿ ಆಗಲಿದೆ ಆಗ್ನೇಯ ಪದವೀಧರರ ಕ್ಷೇತ್ರದಲ್ಲಿ ಮತದಾರರನ್ನು ಭೇಟಿ ಮಾಡಲು ಪ್ರತಿ ಹೋಬಳಿಗೆ ಇಬ್ಬರಿಗೆ ಜವಾಬ್ದಾರಿಯನ್ನು ವಹಿಸಲಾಗಿದೆ. ಮೈತ್ರಿ ಪಕ್ಷದ ನಾಯಕರು ಪ್ರತಿಯೊಬ್ಬ ಮತದಾರರನ್ನು ಭೇಟಿ ಮಾಡಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಯೋಜನೆಗಳನ್ನು ಮನವರಿಕೆ ಮಾಡಬೇಕು ಎಂದು ಕಾರ್ಯಕರ್ತರಿಗೆ ಸಲಹೆ ನೀಡಿದರು.

ಬಿಜೆಪಿ ಪಕ್ಷದ ಜಿಲ್ಲಾ ಘಟಕದ ಅಧ್ಯಕ್ಷ ಸೀಕಲ್ ರಾಮಚಂದ್ರಗೌಡ ಮಾತನಾಡಿ ಅಕ್ಟೋಬರ್ 23 ರಂದು ನಡೆಯಲಿರುವ ಆಗ್ನೇಯ ಪದವೀಧರರ ಕ್ಷೇತ್ರದಲ್ಲಿ 8 ಬಾರಿ ಬಿಜೆಪಿ ಮತ್ತು 2 ಬಾರಿ ಜೆಡಿಎಸ್ ಜಯಗಳಿಸಿತ್ತು. ಈ ಬಾರಿಯೂ ಮೈತ್ರಿಕೂಟದ ಅಭ್ಯರ್ಥಿ ಜಯಗಳಿಸುವುದು ಶತಸಿದ್ದ. ಮೈತ್ರಿ ಪಕ್ಷದ ಮುಖಂಡರು ರಾಜ್ಯ ಸರ್ಕಾರದ ವೈಫಲ್ಯ ಮತ್ತು ಬಿಜೆಪಿ, ಜೆಡಿಎಸ್ ಸರ್ಕಾರದ ಸಾಧನೆಗಳನ್ನು ಮನವರಿಕೆ ಮಾಡಬೇಕು ಎಂದು ತಿಳಿಸಿದರು.

ಅಗ್ನೇಯ ಪಧವೀಧರ ಎನ್‌ಡಿಎ ಅಭ್ಯರ್ಥಿ ಸುರೇಶ್ ಮಾತನಾಡಿ ನನ್ನ ಪರವಾಗಿ ಆಗ್ನೇಯ ಪದವೀಧರ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಈ ಚುನಾವಣೆ ಗೆಲ್ಲೋದ್ರಿಂದ ಮುಂದಿನ 2028ರಲ್ಲಿ ಈ ರಾಜ್ಯದಲ್ಲಿ ಎನ್.ಡಿ.ಎ ಸರ್ಕಾರ ತರಲಿಕ್ಕೆ ಏನು ನಾವು, ಹೆಂಗೆ ಕಾರಣೀಕರ್ತರಾಗಬೇಕು ಎಲ್ಲರೂ ನನ್ನ ಪರವಾಗಿ ಮತ್ತೆ ಪಕ್ಷದ ಪರವಾಗಿ, ಎನ್.ಡಿ.ಎ ಪರವಾಗಿ ನಿಮ್ಮಲ್ಲಿ ವಿನಂತಿಯನ್ನು ಮಾಡಿಕೊಂಡಿದ್ದಾರೆ. ನಿಮ್ಮ ಗ್ರಾಮ ಪಂಚಾಯಿತಿಗಳಲ್ಲಿ ವಾರ್ಡ್‌ಗಳಲ್ಲಿ ಯಾರು ಮತದಾರರಿದ್ದಾರೆ ಅವರನ್ನ ಹೋಗಿ ಭೇಟಿ ಮಾಡುವಂತಹ ಪ್ರಯತ್ನವನ್ನು ಮಾಡಿ. ಅವರಿಗೆ ನಂದು ಕ್ರಮ ಸಂಖ್ಯೆ 2 ಇರುತ್ತೆ. ಅದರ ಮುಂದೆ 1 ಅಂತ, ಕ್ಯಾಲೆಂಡರ್ 1 ಅಂತ ಏನು ಹೇಳ್ತಾರಲ್ಲ, ಕ್ಯಾಲೆಂಡರ್ 1, ಅದನ್ನು ಹಾಕುವುದರ ಮುಖಾಂತರ ಈ ಚುನಾವಣೆ. ಏನು ಚಿಕ್ಕಬಳ್ಳಾಪುರದಲ್ಲಿ 28 ರಿಂದ 30 ಸಾವಿರ ವೋಟ್ ಇದಾವೋ, ನಮ್ಮ ಚಿಂತಾಮಣಿಯಲ್ಲಿ ಅದರಲ್ಲಿ 8 ಸಾವಿರ ವೋಟ್ ಇದಾವೆ ಇವತ್ತು. ಆ 8 ಸಾವಿರದಲ್ಲಿ 80% ಆಫ್ ವೋಟು ಎನ್.ಡಿ.ಎ ಅಭ್ಯರ್ಥಿಯಾದ ನನಗೆ ನೀವು ಕೊಡಿಸಬೇಕೆಂದು ಹೇಳಿದರು.

ವಿಧಾನ ಪರಿಷತ್ತಿನ ಮಾಜಿ ಸದಸ್ಯ ವೈ.ಎ.ನಾರಾಯಣಸ್ವಾಮಿ ಮಾತನಾಡಿ ಪದವೀಧರರ ಕ್ಷೇತ್ರದ ಚುನಾವಣೆಯು ವಿದ್ಯಾವಂತರ ಚುನಾವಣೆಯಾಗಿದ್ದು ಎನ್.ಡಿ.ಎ ಮೈತ್ರಿ ಅಭ್ಯರ್ಥಿ ಕೆ.ಎಸ್. ಸುರೇಶ್ ಜಯಗಳಿಸುವುದು ನಿಶ್ಚಿತ ಪದವೀಧರರಿಗೆ, ಯುವಕರಿಗೆ ಮತ್ತು ಶಿಕ್ಷಕರಿಗೆ ಕಾಂಗ್ರೆಸ್ ಸರ್ಕಾರ ಮೋಸ ಮಾಡಿದೆ ಎಂದು ಟೀಕಿಸಿದರು.

ಬಿಜೆಪಿ ಮುಖಂಡ ಜಿಎನ್ ವೇಣುಗೋಪಾಲ್ ಮಾತನಾಡಿ ಮುಂಬರುವ ಗ್ರಾಮ ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು, ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಸಹೋದರರಂತೆ ಒಗ್ಗಟ್ಟಾಗಿ ಕೆಲಸ ಮಾಡಬೇಕು. ಕೆ.ಎಂ. ಸುರೇಶ್ ಅವರು ಶಿಕ್ಷಣ ಸಂಸ್ಥೆಗಳ ಮೂಲಕ ಯುವಜನತೆಗೆ ನೀಡುತ್ತಿರುವ ಕೊಡುಗೆ ಹಾಗೂ ಅವರ ಸಮಾಜ ಸೇವೆಯನ್ನು ಶ್ಲಾಘಿಸಿ, ಚಿಂತಾಮಣಿಯಲ್ಲಿ ಅವರು ಭರ್ಜರಿ ಬಹುಮತದಿಂದ ಸುಮಾರು 50 ಸಾವಿರ ಮತಗಳ ಅಂತರದಿಂದ ಜಯಗಳಿಸಬೇಕೆಂದರು.

ಸಂಸದ ಮಲ್ಲೇಶಬಾಬು, ಮಾಜಿ ಸಂಸದ ಎಸ್.ಮುನಿಸ್ವಾಮಿ, ಅಭ್ಯರ್ಥಿ ಕೆ.ಎಸ್.ಸುರೇಶ್, ತೋಪಲ್ಲಿ ಚೌಡರೆಡ್ಡಿ, ಶಿವ ಶಂಕರ್, ಚಿಮುಲ್ ನಿರ್ದೇಶಕರಾದ ಅವಲಪ್ಪ, ಕೃಷ್ಣಾರೆಡ್ಡಿ, ಮುಖಂಡರಾದ ಸತ್ಯನಾರಾಯಣ ಮಹೇಶ್, ನಾ.ಶಂಕರ್, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಬೈರೆಡ್ಡಿ, ನಗರ ಅಧ್ಯಕ್ಷ ಗೋವಿಂದ ರಾಜು, ಮತ್ತಿತರರು ಭಾಗವಹಿಸಿದ್ದರು.

# ಮೃತರ ವಾರಸುದಾರರಿಗೆ ಅಪಘಾತ ಪರಿಹಾರ ವಿತರಣೆ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ಕ.ರಾ.ರ.ಸಾ.ನಿಗಮ ಚಿಕ್ಕಬಳ್ಳಾಪುರ ವಿಭಾಗದ ಶಿಡ್ಲಘಟ್ಟ ಘಟಕದ ಕೆ.ಎ.40 ಎಫ್-1041 ಸಂಖ್ಯೆಯ ವಾಹನ ಬಸ್ ವು ಶಿಡ್ಲಘಟ್ಟ-ಬೆಂಗಳೂರು-ಚಿತ್ರದುರ್ಗ ಮಾರ್ಗದಲ್ಲಿ ಕಾರ್ಯಾಚರಣೆಯಲ್ಲಿರುವಾಗ 2026ರ ಏಪ್ರಿಲ್ 14 ರಂದು ಮಧ್ಯಾಹ್ನ 12:15 ರ ಸಮಯದಲ್ಲಿ ಸಿರಾ-ಹಿರಿಯೂರು ರಾಷ್ಟ್ರೀಯ ಹೆದ್ದಾರಿ 48ರ ದ್ವಾರಾಳು ಬಳಿ ಅಪಘಾತಕ್ಕೀಡಾಗಿದ್ದು, ಆ ಸಮಯದಲ್ಲಿ ವಾಹನದಲ್ಲಿ ಪ್ರಯಾಣಿಸುತ್ತಿದ್ದ ರೇಣುಕಮ್ಮ ರವರಿಗೆ ತೀವ್ರತರವಾದ ಗಾಯಗಳಾಗಿ ಮೃತಪಟ್ಟಿರುತ್ತಾರೆ.

ಮೃತರ ವಾರಸುದಾರರಿಗೆ ಅಪಘಾತ ಪರಿಹಾರ ಮೊತ್ತ ರೂ.10,00,000ಗಳಲ್ಲಿ ಅಪಘಾತವಾದ ದಿನ ಪರಿಹಾರವಾಗಿ ರೂ. 25,000 ಗಳನ್ನು ನೀಡಲಾಗಿದೆ ಹಾಗೂ ಉಳಿಕೆ ಮೊತ್ತ 9,75,000 ಗಳ ಚೆಕ್‌ನ್ನು ಮೃತರ ಪತಿಯಾದ ನಾಗರಾಜು ಹೆಚ್, ಲಕ್ಕವ್ವನಹಳ್ಳಿ ಗ್ರಾಮ, ದೊಡ್ಡಘಟ್ಟ ಅಂಚೆ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ರವರಿಗೆ ದಿನಾಂಕ 09/10/2026 ರಂದು ಚಿಕ್ಕಬಳ್ಳಾಪುರ ವಿಭಾಗದ ಕ.ರಾ.ರ.ಸಾ.ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಸಿದ್ದಲಿಂಗೇಶ್. ಎಂ ರವರು ವಿತರಿಸಿರುತ್ತಾರೆ.

# ಸತ್ಯ ಸಾಯಿ ಗ್ರಾಮದಲ್ಲಿ ನವರಾತ್ರಿ ಸಂಭ್ರಮ

## ನಿಜವಾದ ಸಂತೋಷಕ್ಕೆ ಅಧ್ಯಾತ್ಮವೊಂದೇ ಆಧಾರ: ಪದ್ಮಶ್ರೀ ಗೌರಿಶಂಕರ್

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ಕ್ಷಣಿಕ ಸುಖದ ಆಸೆಯಿಂದ ಭೌತಿಕ ವಸ್ತುಗಳ ಸಂಪಾದನೆಗಾಗಿ ಮನುಷ್ಯರು ಹಲವು ವರ್ಷ ಕಷ್ಟಪಡುತ್ತಾರೆ. ಅವು ನಿಜವಾದ ಸುಖವಲ್ಲ ಎಂದು ಅರಿವಾಗಿ, ಶಾಶ್ವತ ಸುಖ ಕೊಡುವ ಅಧ್ಯಾತ್ಮ ಜ್ಞಾನದ ಕಡೆಗೆ ಮನಸ್ಸು ಹರಿಯುವ ಹೊತ್ತಿಗೆ ಬಹಳ ತಡವಾಗಿರುತ್ತದೆ ಎಂದು ಶೃಂಗೇರಿ ಶಾರದಾ ಸಂಸ್ಥಾನದ ನಿಕಟಪೂರ್ವ ಧರ್ಮಾಧಿಕಾರಿ, ಪದ್ಮಶ್ರೀ ವಿ.ಆರ್. ಗೌರಿಶಂಕರ್ ಅಭಿಪ್ರಾಯಪಟ್ಟರು.



ಮುದ್ದೇನಹಳ್ಳಿ ಸತ್ಯ ಸಾಯಿ ಗ್ರಾಮದಲ್ಲಿ ನಡೆಯುತ್ತಿರುವ ಶಾರದಾ ನವರಾತ್ರಿ ಕಾರ್ಯಕ್ರಮದ ಎರಡನೇ ದಿನವಾದ ಸೋಮವಾರ ಅ. 12 ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಅವರು, ಗುರುವಿನ ಮಾರ್ಗದರ್ಶನದಲ್ಲಿ ಆಧ್ಯಾತ್ಮಿಕ ಮಾರ್ಗದಲ್ಲಿ ಮುನ್ನಡೆದರೆ ಮಾತ್ರ ನಿಜವಾದ ಸಂತೋಷದ ಅರಿವಾಗುತ್ತದೆ ಎಂದು ಹೇಳಿದರು.

ಮುದ್ದೇನಹಳ್ಳಿಯಲ್ಲಿ ಹತ್ತಾರು ಒಳ್ಳೆಯ ಕೆಲಸಗಳು ನಡೆಯುತ್ತಿವೆ. ಇಲ್ಲಿ ಸಾಮಾನ್ಯ ಮನುಷ್ಯರೂ ದೇವರೊಂದಿಗೆ ಸುಲಭವಾಗಿ ಬೆರೆಯಬಹುದಾದ ವಾತಾವರಣವಿದೆ. ಸದ್ಗುರುಗಳು ಸೇವೆಯನ್ನೂ ಆಧ್ಯಾತ್ಮಿಕ ಸಾಧನೆಯ ಮಾರ್ಗವನ್ನಾಗಿಸಿದ್ದಾರೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಅತಿಥಿಯಾಗಿ ಪಾಲ್ಗೊಂಡಿದ್ದ ತಮಿಳುನಾಡಿನ ಮದುರೈ ನಗರದ ಉದ್ಯಮಿ ಕೆ.ಹರಿತ್ಯಾಗರಾಜನ್ ಮಾತನಾಡಿ, ಎಲ್ಲರೊಳಗೆ ಇರುವ ಭಂಡಾಸುರರನ್ನು ಗೆಲ್ಲಲು ದುರ್ಗಾದೇವಿಯು ಸಹಾಯ ಮಾಡುತ್ತಾಳೆ. ಸರಸ್ವತಿ ಜ್ಞಾನ, ಲಕ್ಷ್ಮೀ ಸಂಪತ್ತು ಮತ್ತು ದುರ್ಗಾ ಧೈರ್ಯ ರೂಪದಲ್ಲಿ ದೇವಿಯನ್ನು ನವರಾತ್ರಿ ಸಂದರ್ಭದಲ್ಲಿ ಪೂಜಿಸುತ್ತೇವೆ. ಇದರ ಒಳಾರ್ಥಗಳನ್ನು ಗ್ರಹಿಸಬೇಕು ಎಂದು ಸಲಹೆ ಮಾಡಿದರು.

ಜ್ಞಾನ, ಸಂಪತ್ತು ಮತ್ತು ಧೈರ್ಯದಿಂದ ನಾವು ಏನು ಸಾಧಿಸುತ್ತೇವೆ ಎನ್ನುವುದು ಬಹಳ ಮುಖ್ಯ. ಈ ನಿಜವಾದ ಸಂಪತ್ತನ್ನು ನಾವು ಸಮರ್ಪಕವಾಗಿ ಬಳಸಿಕೊಂಡರೆ ಸುಭದ್ರ ರಾಷ್ಟ್ರ ನಿರ್ಮಾಣ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ ಮಾತನಾಡಿ, ನಮ್ಮ ನಿತ್ಯ ಕರ್ತವ್ಯಗಳನ್ನು ನಿರ್ವಹಿಸುವುದರ ಜೊತೆಗೆ ನಾವೆಲ್ಲರೂ ಆಧ್ಯಾತ್ಮಿಕವಾಗಿಯೂ ಹೇಗೆ ಬಾಳು ಸಾಗಿಸಬೇಕು ಎನ್ನುವುದನ್ನು ಸದ್ಗುರು ಶ್ರೀ ಮಧುಸೂದನ ಸಾಯಿ ಅದ್ಭುತವಾಗಿ ನಿರೂಪಿಸುತ್ತಿದ್ದಾರೆ. ಇಡೀ ಜಗತ್ತೇ ಒಂದು ಕುಟುಂಬ ಎನ್ನುವ ಸನಾತನ ಧರ್ಮದ ಆಶಯವನ್ನು ಅಕ್ಷರಶಃ ಪಾಲಿಸುತ್ತಿದ್ದಾರೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಸದ್ಗುರು ಶ್ರೀ ಮಧುಸೂದನ ಸಾಯಿ, ಕರ್ನಾಟಕದಲ್ಲಿ ಇಂದು ಬರಗಾಲದ ವಾತಾವರಣವಿದೆ. ನಾವೆಲ್ಲರೂ ನಮ್ಮ ಕರ್ತವ್ಯಗಳನ್ನು ಸರಿಯಾಗಿ ನಿರ್ವಹಿಸಿ ದೇವಿಯಲ್ಲಿ ಪ್ರಾರ್ಥನೆ ಸಲ್ಲಿಸಿದರೆ ಅವಳ ಕೃಪೆಯಿಂದ ಖಂಡಿತ ಒಳ್ಳೆಯದಾಗುತ್ತದೆ ಎಂದು ಭರವಸೆ ನೀಡಿದರು.

ದೇವಿಯೇ ಬ್ರಹ್ಮಾಂಡದ ಶಕ್ತಿಯಾಗಿದ್ದಾಳೆ. ಅವಳು ಕದಲದಿದ್ದರೆ ಏನೂ ಆಗುವುದಿಲ್ಲ. ಅವಳ ಶಕ್ತಿಯೇ ಮೋಡಕ್ಕೆ ಸೇರಿ ಮಳೆಯಾಗಿ ಸುರಿದು, ಬೆಳೆಯಾಗಿ ಬೆಳೆಯಬೇಕು. ಅದೇ ಆಹಾರ ನಮ್ಮಲ್ಲಿ ಶಕ್ತಿಯಾಗಬೇಕು. ದೇವಿ ಮನುಷ್ಯರಿಂದ ಹೆಚ್ಚೇನೂ ಅಪೇಕ್ಷೆ ಪಡುವುದಿಲ್ಲ. ಅವಳು ಕೊಟ್ಟಿದ್ದನ್ನೇ ಶ್ರದ್ಧೆಯಿಂದ ಅವಳಿಗೆ ಮರಳಿಸಿದರೆ, ಬಡವರ ಸೇವೆ ಮಾಡಿದರೆ ಅವಳು ಅನುಗ್ರಹ ಮಾಡುತ್ತಾಳೆ ಎಂದು ಹೇಳಿದರು.

ಪ್ರಶಾಂತಿ ಬಾಲಮಂದಿರ ಟ್ರಸ್ಟ್ ಅಧ್ಯಕ್ಷ ಡಾ. ಬಿ.ಎನ್. ನರಸಿಂಹಮೂರ್ತಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಇಂದು ಆಶ್ಲೇಷ ಬಲಿ, ಪವಮಾನ ಹೋಮ ಸತ್ಯ ಸಾಯಿ ಗ್ರಾಮದಲ್ಲಿ ನವರಾತ್ರಿಯ ಮೂರನೇ ದಿನವಾದ ಮಂಗಳವಾರ ಅ. 13 ಪವಮಾನ ಹೋಮ ಮತ್ತು ಆಶ್ಲೇಷ ಬಲಿ ಧಾರ್ಮಿಕ ವಿಧಿಗಳು ನೆರವೇರಲಿವೆ. ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಸಾವಿರಾರು ಮಹಿಳೆಯರಿಂದ ಶ್ರೀ ಲಲಿತಾ ಸಹಸ್ರನಾಮ ಕುಂಕುಮಾರ್ಚನೆ ನವರಾತ್ರಿಯ ಎರಡನೇ ದಿನವಾದ ಸೋಮವಾರ ಅ. 12 ಶ್ರೀ ಲಲಿತಾ ಸಹಸ್ರನಾಮ ಕುಂಕುಮಾರ್ಚನೆಯಲ್ಲಿ ಸಾವಿರಾರು ಮಹಿಳೆಯರು ಪಾಲ್ಗೊಂಡಿದ್ದರು. ಬಂದಿದ್ದ ಎಲ್ಲ ಭಕ್ತರಿಗೂ ಶ್ರೀ ಲಲಿತಾ ತ್ರಿಪುರಸುಂದರಿ ದೇವಿಯ ಚಿತ್ರಪಟ ಮತ್ತು ಕುಂಕುಮದ ಭರಣಿಗಳನ್ನು ನೀಡಿ ನಿಗದಿತ ಆಸನಗಳಲ್ಲಿ ಕೂರಿಸಲಾಯಿತು. ಶೃಂಗೇರಿಯಿಂದ ಬಂದಿದ್ದ ಋತ್ವಿಜರು ಸಹಸ್ರನಾಮವನ್ನು ಪಾರಾಯಣ ಮಾಡುತ್ತಿರುವಾಗ ಮಹಿಳೆಯರು ಶ್ರದ್ಧೆಯಿಂದ ಕುಂಕುಮಾರ್ಚನೆ ಮಾಡಿದರು.

ಶ್ರೀ ಲಲಿತಾ ಸಹಸ್ರನಾಮದ ಅರ್ಥ ವಿವರಿಸಿದ ಸದ್ಗುರು ತಮ್ಮ ಆಶೀರ್ವಚನದಲ್ಲಿ ಸದ್ಗುರು ಶ್ರೀ ಮಧುಸೂದನ ಸಾಯಿ ಅವರು ಪ್ರತಿವರ್ಷದಂತೆ ಈ ವರ್ಷವೂ ಶ್ರೀ ಲಲಿತಾ ಸಹಸ್ರನಾಮದ ಹಲವು ನಾಮಗಳಿಗೆ ಅರ್ಥ ವಿವರಿಸಿದರು. ಪ್ರಾಯೋಗಿಕವಾಗಿ ದೈನಂದಿನ ಬದುಕಿಗೆ ಅನ್ವಯಿಸಿ ಸದ್ಗುರುಗಳು ಅರ್ಥ ವಿವರಿಸುವ ಕ್ರಮವು ವ್ಯಾಪಕ ಮೆಚ್ಚುಗೆಗೆ ಪಾತ್ರವಾಗಿದೆ.

ಸೋಮವಾರದ ಆಶೀರ್ವಚನದಲ್ಲಿ ಯಜ್ಞಪ್ರಿಯಾ ಯಜ್ಞಕರ್ತೀ ಯಜಮಾನ ಸ್ವರೂಪಿಣಿ ಸಾಲು ಪ್ರಸ್ತಾಪಿಸಿದ ಸದ್ಗುರುಗಳು, ದೇವಿಯು ಸ್ವತಃ ಯಜ್ಞಪ್ರಿಯಳು, ಅವಳೇ ಯಜ್ಞ ಮಾಡುವವಳು ಮತ್ತು ಅವಳ ಪ್ರೀತ್ಯರ್ಥವಾಗಿಯೇ ನಾವು ಯಜ್ಞ ಮಾಡಬೇಕಾಗಿದೆ. ಇಲ್ಲಿ ಯಜ್ಞ ಎನ್ನುವುದನ್ನು ಸೇವೆ ಎಂದು ಅನ್ವಯಿಸಿಕೊಳ್ಳಬಹುದು. ದೇವಿಯ ಪ್ರೀತ್ಯರ್ಥವಾಗಿಯೇ ನಮ್ಮ ಸಕಲ ಕರ್ಮಗಳನ್ನೂ ನಿರ್ವಹಿಸಿ, ಕೊನೆಗೆ ಅವಳಿಗೇ ಅದನ್ನು ಅರ್ಪಣೆ ಮಾಡಬೇಕು ಎಂದು ಸಲಹೆ ಮಾಡಿದರು.

ಆ ಬ್ರಹ್ಮಕೀಟ ಜನನಿ ವರ್ಣಾಶ್ರಮ ವಿಧಾಯಿನಿ ವಾಕ್ಯ ಪ್ರಸ್ತಾಪಿಸಿದ ಸದ್ಗುರುಗಳು, ಇಡೀ ಜಗತ್ತನ್ನು ಸೃಷ್ಟಿಸಿರುವ ತಾಯಿಯು ಅದು ಹೇಗೆ ಕಾರ್ಯನಿರ್ವಹಿಸಬೇಕೆಂಬುದನ್ನೂ ನಿರ್ಧರಿಸುತ್ತಾಳೆ. ಧರ್ಮಕ್ಕೆ ಆಧಾರವಾಗಿರುವ ಅವಳೇ ಸಂಪತ್ತಿನ ಅಧಿದೇವತೆಯೂ ಆಗಿದ್ದಾಳೆ.

ಅವಳೇ ಸಂಪತ್ತನ್ನು ವೃದ್ಧಿಸುತ್ತಾಳೆ ಎಂದು ಧರ್ಮಾಧಾರ ಧನಾಧ್ಯಕ್ಷ ಧನ-ಧಾನ್ಯ ವಿವರ್ಧಿನಿ ಸಾಲಿನ ಮೂಲಕ ವಿವರಿಸಿದರು. ತಾಯಿಯ ಕೃಪೆಯಿಂದ ಮೋಡ ಹೆಪ್ಪುಕಟ್ಟಿ ಮಳೆ ಚೆನ್ನಾಗಿ ಬರಲಿ. ಬರಗಾಲದ ಭೀತಿ ಅಳಿಯಲಿ ಎಂದು ಜನರ ಪರವಾಗಿ ದೇವಿಯಲ್ಲಿ ಪ್ರಾರ್ಥಿಸಿದರು.

Printed by PRABHAKR G., Printed at M/s. SAI PRINTS, # 8, Subramanya Lane, Cottonpet, Bengaluru, Karnataka - 560053
Published by Smt. LAKSHMINARASAMMA, Owned by Smt. LAKSHMINARASAMMA,
Published at : Varalakonda Village, Somenahalli Hobli, Gudibande Taluk, Chikkaballapur Dist-562104, Karnataka. Editor SHIVAKUMAR K. Mobile: 8147582389 / 9743641515